ವಿಜಯಪುರ | ಸಂಪುಟ 02 | ಸಂಚಿಕೆ 28 | ಪುಟ 4 | ₹ 3.00

https://udayarashminews.com

udayarashmi 7026028778

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com | RNI NO: KARKAN/2023/86203 | ಭಾನುವಾರ, ಮಾರ್ಚ್ 17, 2024



“ಲೋಕಸಭೆ ಚುನಾವಣೆಗಾಗಿ ದೂರು ನಿರ್ವಹಣಾ ಕೋಶ ಸ್ಥಾಪಿಸಲಾಗಿದ್ದು, ಸಾರ್ವಜನಿಕರು ದೂರು ಸಲ್ಲಿಸಲು ಜಿಲ್ಲಾ ನೋಡಲ್ ಅಧಿಕಾರಿ ಮೊಬೈಲ್ ಸಂಖ್ಯೆ 9945354447ಗೆ ಕರೆ ಮಾಡಿ ದೂರು ದಾಖಲಿಸಬಹುದು.”

– ಟಿ.ಭೂಬಾಲನ್
ಜಿಲ್ಲಾಧಿಕಾರಿ ಹಾಗೂ ಚುನಾವಣೆ ಅಧಿಕಾರಿ

**ಕರ್ನಾಟಕದಲ್ಲಿ 2 ಹಂತಗಳಲ್ಲಿ ಮತದಾನ | ಜೂ.4ರಂದು ಫಲಿತಾಂಶ | ಮುಖ್ಯ ಚುನಾವಣಾ ಆಯುಕ್ತ ರಾಜೀವ್ ಕುಮಾರ್ ಮಾಹಿತಿ**

# ಏ.19ರಿಂದ 7 ಹಂತಗಳಲ್ಲಿ ಲೋಕಸಭೆ ಚುನಾವಣೆ

ನವದೆಹಲಿ: ಲೋಕಸಭೆ ಚುನಾವಣೆ ದಿನಾಂಕ ಪ್ರಕಟವಾಗಿದ್ದು, ಏಪ್ರಿಲ್ 19ರಿಂದ 7 ಹಂತಗಳಲ್ಲಿ ದೇಶದಾದ್ಯಂತ ಮತದಾನ ನಡೆಯಲಿದೆ. ಕರ್ನಾಟಕದಲ್ಲಿ ಎರಡು ಹಂತಗಳಲ್ಲಿ ಮತದಾನ ನಡೆಯಲಿದ್ದು, ಜೂನ್4 ರಂದು ಫಲಿತಾಂಶ ಪ್ರಕಟವಾಗಲಿದೆ.

ಮಾ.16ರಿಂದ ದೇಶದಾದ್ಯಂತ ನೀತಿ ಸಂಹಿತೆ ಜಾರಿಯಾಗಲಿದ್ದು, ಏಪ್ರಿಲ್ 26ರಂದು ಮೊದಲ ಹಂತದ ಮತದಾನ ಮತ್ತು ಮೇ 7ರಂದು ಎರಡನೇ ಹಂತದ ಮತದಾನ ಪ್ರಕ್ರಿಯೆ ನಡೆಯಲಿದೆ. 14 ಕ್ಷೇತ್ರಗಳಿಗೆ ಮೊದಲ ಹಂತದಲ್ಲಿ ಮತ್ತು ಇನ್ನುಳಿದ 14 ಕ್ಷೇತ್ರಗಳಿಗೆ 2ನೇ ಹಂತದಲ್ಲಿ ಮತದಾನ ನಡೆಯಲಿದೆ.

ಮುಖ್ಯ ಚುನಾವಣಾ ಆಯುಕ್ತರಾದ ರಾಜೀವ್ ಕುಮಾರ್ ಅವರು ಪತ್ರಿಕಾಗೋಷ್ಠಿಯನ್ನು ನಡೆಸಿದ್ದು, ಪತ್ರಿಕಾಗೋಷ್ಠಿಯಲ್ಲಿ ಚುನಾವಣಾ ಆಯುಕ್ತರಾದ ಜ್ಞಾನೇಶ್ ಕುಮಾರ್ ಮತ್ತು ಸುಖಬೀರ್ ಸಂಧು ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

ದೆಹಲಿಯ ವಿಜ್ಞಾನ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ರಾಜೀವ್ ಕುಮಾರ್, ಪ್ರತಿಯೊಂದು ಚುನಾವಣೆ ನಮಗೆ ಪರೀಕ್ಷೆ ಇದ್ದಂತೆ, ನ್ಯಾಯ ಸಮ್ಮತ, ಮುಕ್ತ ಪಾರದರ್ಶಕ ಚುನಾವಣೆ ನಮ್ಮ ಉದ್ದೇಶವಾಗಿದೆ ಎಂದು ಹೇಳಿದ್ದಾರೆ.

ನಾವು ರಾಷ್ಟ್ರಕ್ಕೆ ನಿಜವಾದ ಹಬ್ಬದ, ಪ್ರಜಾಸತ್ತಾತ್ಮಕ ವಾತಾವರಣವನ್ನು ನೀಡಲು ಬದ್ಧರಾಗಿದ್ದೇವೆ. 17ನೇ ಲೋಕಸಭೆಯ ಅವಧಿಯು 16 ಜೂನ್ 2024 ರಂದು




ಮುಕ್ತಾಯಗೊಳ್ಳಲಿದೆ. ಆಂಧ್ರ ಪ್ರದೇಶ, ಒಡಿಶಾ, ಅರುಣಾಚಲ ಪ್ರದೇಶ ಮತ್ತು ಸಿಕ್ಕಿಂ ವಿಧಾನಸಭೆಯ ಅವಧಿ ಕೂಡ ಜೂನ್ 2024 ರಲ್ಲಿ ಅವಧಿ ಮುಗಿಯಲಿದೆ. ಇದೇ ವೇಳೆ ಜಮ್ಮು ಮತ್ತು ಕಾಶ್ಮೀರದಲ್ಲಿ ಚುನಾವಣೆಗಳು ನಡೆಯಲಿವೆ ಎಂದು ಹೇಳಿದ್ದಾರೆ.




10 ಲಕ್ಷದ 5 ಸಾವಿರ ಮತಗಟ್ಟೆಗಳ ಸ್ಥಾಪನೆ ಮಾಡಲಾಗಿದೆ. ದೇಶದಲ್ಲಿ 97 ಕೋಟಿ ಮತದಾರರಿದ್ದಾರೆ. ಮತದಾನಕ್ಕೆ 55 ಲಕ್ಷ ಇವಿಎಂಗಳ ವ್ಯವಸ್ಥೆ ಮಾಡಲಾಗಿದೆ. 1.5ಕೋಟಿ ಅಧಿಕಾರಿಗಳು ಭದ್ರತಾ ಸಿಬ್ಬಂದಿಗಳ ನಿಯೋಜನೆ ಮಾಡಲಾಗುವುದು. 49.7ಕೋಟಿ ಪುರುಷ ಮತದಾರರಿದ್ದಾರೆ. 1.8 ಕೋಟಿ ಮತದಾರರು ಮೊದಲ ಬಾರಿಗೆ ಮತದಾನ ಮಾಡಲಿದ್ದಾರೆ. 47.1ಕೋಟಿ ಮಹಿಳಾ ಮತದಾರರಿದ್ದಾರೆ. 85 ವರ್ಷಕ್ಕಿಂತ ಮೇಲ್ಪಟ್ಟ 82 ಲಕ್ಷ ಮತದಾರರಿದ್ದಾರೆ. 19.74 ಯುವ ಮತದಾರರಿದ್ದಾರೆ. 12 ರಾಜ್ಯಗಳಲ್ಲಿ ಮಹಿಳಾ ಮತದಾರರ ಸಂಖ್ಯೆ ಹೆಚ್ಚಳವಾಗಿದೆ. 2.18 ಲಕ್ಷ ಶತಾಯುಷಿಗಳು ಮತ ಚಲಾಯಿಸಲಿದ್ದಾರೆ. 12 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳು ಪುರುಷ ಮತದಾರರಿಗಿಂತ ಹೆಚ್ಚಿನ ಮಹಿಳೆಯರನ್ನು ಹೊಂದಿವೆ ಎಂದು ಹೇಳಿದ್ದಾರೆ.

ಮತಗಟ್ಟೆಗಳಲ್ಲಿ ವ್ಹೀಲ್ ಚೇರ್, ಹೆಲ್ಪ್ ಡೆಸ್ಕ್ ಮೂಲಭೂತ ಸೌಕರ್ಯಗಳ ವ್ಯವಸ್ಥೆ ಮಾಡಲಾಗುವುದು, 40%ಕ್ಕೂ ಅಧಿಕ ವಿಕಲಚೇತನ ಮತದಾರರು ಮನೆಯಿಂದಲೇ ಮತದಾನ ಮಾಡಲು ವ್ಯವಸ್ಥೆ ಮಾಡಲಾಗುವುದು. ಅಭ್ಯರ್ಥಿಗಳ ಕ್ರಿಮಿನಲ್ ಕೇಸ್‌ಗಳ ಬಗ್ಗೆ ಮಾಹಿತಿ ನೀಡುವುದು ಕಡ್ಡಾಯವಾಗಿದೆ. ಅಕ್ರಮವಾಗಿ ಹಣ ಸಾಗಿಸಿದರೆ, ಮತದಾರರಿಗೆ ಹಣ ಹಂಚಿಕೆ ಮಾಡಿದರೆ ಕಠಿಣ ಕ್ರಮ ಕೈಗೊಳ್ಳಲಾಗುವುದು, ಪೊಲೀಸರಿಂದ ಚೆಕ್ ಪೋಸ್ಟ್‌ಗಳಲ್ಲಿ ಪರಿಶೀಲನೆಗೆ ವ್ಯವಸ್ಥೆ ಮಾಡಲಾಗುವುದು ಎಂದು ಹೇಳಿದ್ದಾರೆ.

**ಏ.26ರಂದು ಮೊದಲ ಹಂತದಲ್ಲಿ ಚುನಾವಣೆ ನಡೆಯಲಿರುವ ಜಿಲ್ಲೆಗಳು**

ಮೊದಲ ಹಂತದಲ್ಲಿ ಚಿತ್ರದುರ್ಗ, ಚಾಮರಾಜನಗರ, ಬೆಂಗಳೂರ ಉತ್ತರ, ಬೆಂಗಳೂರು ದಕ್ಷಿಣ, ದಕ್ಷಿಣ ಕನ್ನಡ, ಉಡುಪಿ–ಚಿಕ್ಕಮಗಳೂರು, ಹಾಸನ, ಚಿಕ್ಕಬಳ್ಳಾಪುರ, ಬೆಂಗಳೂರು ಕೇಂದ್ರ, ತುಮಕೂರು, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ, ಮೈಸೂರು–ಕೊಡಗು, ಕೋಲಾರ ಕ್ಷೇತ್ರಗಳಲ್ಲಿ ಚುನಾವಣೆ ನಡೆಯಲಿದೆ.

ಸೂರ್ಯಾಸ್ತದ ಬಳಿಕ ಎಟಿಎಂ ವಾಹನ ಸಂಚಾರಕ್ಕೆ ಅನುಮತಿ ಇಲ್ಲ, ಸುಳ್ಳು ಮಾಹಿತಿಯನ್ನು ರವಾನೆ ಮಾಡುವಂತಿಲ್ಲ, 24 ಗಂಟೆ ಪೊಲೀಸ್ ಕಂಟ್ರೋಲ್ ರೂಂ ಕಾರ್ಯಾಚರಣೆ ಇರಲಿದೆ, ಸಾಮಾಜಿಕ ಜಾಲತಾಣಗಳ ಮೇಲೆ ಕಣ್ಣಿಡಲಿದ್ದೇವೆ, ಜನರನ್ನು ಪ್ರಚೋದನೆ, ಇಬ್ಭಾಗ ಮಾಡುವಂತಿಲ್ಲ, ದ್ವೇಷ ಭಾಷಣ ಮಾಡುವಂತಿಲ್ಲ, ಸುಳ್ಳು ಜಾಹೀರಾತನ್ನು ಪ್ರಸಾರ ಮಾಡುವಂತಿಲ್ಲ, ವೈಯಕ್ತಿಕ ಟೀಕೆ ಮಾಡುವಂತಿಲ್ಲ ಎಂದು ರಾಜೀವ್ ಕುಮಾರ್ ಹೇಳಿದ್ದಾರೆ.


**ಮೇ.7ರಂದು ಎರಡನೇ ಹಂತದ ಚುನಾವಣೆ ನಡೆಯಲಿರುವ ಜಿಲ್ಲೆಗಳು**

ಬೆಳಗಾವಿ, ಬಳ್ಳಾರಿ, ಚಿಕ್ಕೋಡಿ, ಹಾವೇರಿ–ಗದಗ, ಕಲಬುರ್ಗಿ, ಬೀದರ್, ಧಾರವಾಡ, ಕೊಪ್ಪಳ ರಾಯಚೂರು, ಉತ್ತರಕನ್ನಡ, ದಾವಣಗೆರೆ, ಶಿವಮೊಗ್ಗ, ಬಾಗಲಕೋಟೆ, ವಿಜಯಪುರ ಜಿಲ್ಲೆಗಳಲ್ಲಿ 2ನೇ ಹಂತದ ಮತದಾನ ನಡೆಯಲಿದೆ.

## ರಾಜ ನುಡಿ

ಎಷ್ಟೇ ಭಾರವಾದ ವಾಹನವಿದ್ದರೂ, ಅದನ್ನು ಮೇಲೆತ್ತಲು ‘ಜಾಕ್’ ಕೇಳುವುದು ಅಂಗೈಯಷ್ಟೇ ಜಾಗ, ಅದೆಂತದ್ದೆ ರಾಗ–ದ್ವೇಷಗಳಿದ್ದರೂ ಅಂತಹಾಗಳಿಂದ ಮನುಷ್ಯತ್ವವನ್ನು ಮೇಲೆತ್ತಿ ಹಿಡಿಯಲು ಬೇಕಿರುವುದು ಹಿಡಿ ಮುಷ್ಟಿಯಷ್ಟು ಹೃದಯದಲ್ಲಿ ಜಾಗ..

–ಡಾ. ರಾಜಶೇಖರ ನಾಗೂರ



## ವಚನ ಚಿಂತನ 325

**ಅರಿವು ನಿಮ್ಮಲ್ಲಿಯೇ ತದ್ಗತವಾಗಿದೆ**

*ನಿಮ್ಮಲ್ಲಿ ನೀವು ತಿಳಿದು ನೋಡಿರೇ*
*ಅನ್ಯವಿಲ್ಲ ಕಾಣಿರಣ್ಣ*
*ಅರಿವು ನಿಮ್ಮಲ್ಲಿಯೇ ತದ್ಗತವಾಗಿದೆ*
*ಅನ್ಯ ಭಾವವ ನೆನೆಯದೆ ತನ್ನೊಳಗೆ*
*ತಾನೆಚ್ಚರಬಲ್ಲಡೆ*
*ತನ್ನಲ್ಲಿಯೇ ತನ್ಮಯ ಗುಹೇಶ್ವರಾ*
*– ಅಲ್ಲಮಪ್ರಭುಗಳು*

ಭೂಮಿಯ ಎಲ್ಲ ಜೀವರಾಶಿಗಳಲ್ಲಿ ಆ ದೇವರು (ಚೈತನ್ಯ) ಅಡಗಿದ್ದಾನೆ. ಅದನ್ನು ಅರಿಯುವುದೇ ಈ ಜನ್ಮದ ಮೂಲ ಉದ್ದೇಶ. ಇದನ್ನು ಸಾಧಿಸುವುದಕ್ಕಾಗಿ ಇರುವ ಸರಳ ವಿಧಾನವೆಂದರೆ ಇಷ್ಟಲಿಂಗ ಪೂಜೆ(ಯೋಗ).ಇದನ್ನು ಜಗತ್ತಿಗೆ ಮೊಟ್ಟ ಮೊದಲಬಾರಿಗೆ ನೀಡಿದವರು ಮಹಾತ್ಮ ಬಸವೇಶ್ವರರು. 12ನೇ ಶತಮಾನದಲ್ಲಿಯೇ ಈ ವಿಚಾರವನ್ನು ನಮಗೆಲ್ಲ ತಿಳಿಸಿದ್ದರೂ ಇಂದು ದೇವರನ್ನು ಹೊರಗೆ ಅರಸುತ್ತಿರುವುದು ನಿಜಕ್ಕೂ ದುರ್ದೈವದ ಸಂಗತಿ. ಅಲ್ಲಮರು ಈ ವಚನದಲ್ಲಿ ಸ್ಪಷ್ಟವಾಗಿ ಅರಿವು/ದೈವಸಾಕ್ಷತ್ಕಾರ ನಿಮ್ಮಲ್ಲಿಯೇ ತದ್ಗತವಾಗಿದೆ ಅನ್ಯ ಭಾವವ ನೆನೆಯದೆ ತನ್ನೊಳಗೆ ತಾನೆಚ್ಚರಬಲ್ಲಡೆ ತನ್ನಲ್ಲಿಯೇ ತನ್ಮಯ ಎಂದಿದ್ದಾರೆ. ನಮ್ಮೊಳಗೆ ಅಡಗಿರುವ ಆ ಚೈತನ್ಯವನ್ನು ಅರಿಯುವ ಸಲುವಾಗಿ ಬಸವಣ್ಣನವರು ಇಷ್ಟಲಿಂಗವನ್ನು ಸಂಶೋಧಿಸಿದರು ಹಾಗೂ ಅದರ ಮೂಲಕ ಅನುಭಾವವನ್ನು ಪಡೆಯುವ ವಿಧಾನವನ್ನು ತಿಳಿಸಿದ್ದಾರೆ. ದೇವರನ್ನು ಹೊರಗೆ ಅರಸಿ ಬಳಲದೆ ನಮ್ಮ ಪಯಣ ಅಂತರಂಗದಲ್ಲಿ ಸಾಗಲಿ ಎಂಬುದು ಈ ವಚನದ ಪ್ರಮುಖ ಆಶಯವಾಗಿದೆ.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

**ಸಿಂದಗಿಯ ವಾರ್ಡ ನಂ13ರ ನಿವಾಸಿಗಳು | ಬಿಜೆಪಿ ಮಂಡಲದಿಂದ ತಹಶೀಲ್ದಾರಗೆ ಮನವಿ**

# ಸ್ಲಂ ನಿವಾಸಿಗಳ ತೆರವುಗೊಳಿಸದಂತೆ ಬಿಜೆಪಿ ಪ್ರತಿಭಟನೆ

**ಉದಯರಶ್ಮಿ ನ್ಯೂಸ್**

ಸಿಂದಗಿ: ವಾರ್ಡ ನಂ 13ರಲ್ಲಿ ಸುಮಾರು 40ವರ್ಷಗಳಿಂದ ಇಲ್ಲಿಯ ನಿವಾಸಿಗಳು ವಾಸಿಸುತ್ತಿದ್ದಾರೆ. ಆದರೆ ಈವರೆಗೂ ಅವರಿಗೆ ಯಾರು ಕೂಡ ಸೂರು ಒದಗಿಸುವ ಕಾರ್ಯ ಮಾಡಿಲ್ಲ ಎಂದು ಬಿಜೆಪಿ ಮಂಡಲ ಅಧ್ಯಕ್ಷ ಸಂತೋಷ ಪಾಟೀಲ ಡಂಬಳ ಹೇಳಿದರು.

ಪಟ್ಟಣದ ಕಾಳಿಕಾ ನಗರದ ವಾರ್ಡ ನಂ13ರ ಸ್ಲಂ ನಿವಾಸಿಗಳನ್ನು ತೆರವು ಗೊಳಿಸಬಾರದೆಂದು ಆಗ್ರಹಿಸಿ ಬಿಜೆಪಿ ಮಂಡಲದ ವತಿಯಿಂದ ಹಮ್ಮಿಕೊಂಡ ಪ್ರತಿಭಟನೆಯ ನೇತೃತ್ವವನ್ನು ವಹಿಸಿ ಮಾತನಾಡಿದ ಅವರು, ಇಂದು ಈ ಜನರ ಜೀವನ ಚಿಂತಾಜನಕವಾಗಿದೆ. ಸರಕಾರ ಆದೇಶದಂತೆ ಸ್ಲಂ ನಿವಾಸಿಗಳನ್ನು ತೆರವುಗೊಳಿಸಬೇಕಾದರೆ ಅವರಿಗೆ ಮೊದಲು ಸೂರು ಕಲ್ಪಿಸಬೇಕು ಎಂಬುದಿದೆ. ಹಾಗೆ ಮಾಡದೆ ದಬ್ಬಾಳಿಕೆ ಮಾಡುತ್ತಿರುವುದು ಸರಿಯಲ್ಲ. ಇದೆ ರೀತಿ ನಿಮ್ಮ ದಬ್ಬಾಳಿಕೆ



ಮುಂದುವರೆದರೆ ಎಸಿ ಕಛೇರಿಯ ಮುಂದೆ ಧರಣಿ ಮಾಡಬೇಕಾಗುತ್ತದೆ ಎಂದು ಎಚ್ಚರಿಸಿದರು.

ಸ್ಲಂ ನಿವಾಸಿಗಳ ಮನೆ ತೆರವುಗೊಳಿಸಬೇಕಾದರೆ ಬಿಜೆಪಿ ಕಾರ್ಯಕರ್ತರ ಮೇಲೆ ಮೊದಲು ಜೆಸಿಬಿ ಹಾಯಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಈ ವೇಳೆ ವಾರ್ಡ ನಂ 13ರ ಸ್ಲಂ ನಿವಾಸಿ ಕಾಂತಮ್ಮ ಚಾಂದಕವಟೆ ಮಾತನಾಡಿ, ಇದರ ಕುರಿತಾಗಿ ನಾವು ಶಾಸಕರ ಬಳಿ ಕೇಳಲು ಹೋದಾಗ ನಿಮಗೆ ಒಂದು ತಿಂಗಳು ಗಡುವು ನೀಡಿದ್ದೇವೆ, ಸಮಯ ಮುಗಿದಿದೆ. ಇನ್ನು ನೀವು ಇಂಡಿ ಎಸಿ ಅವರನ್ನು ಕೇಳಿ ಎಂದಿದ್ದಾರೆ. ಮೂರು ತಿಂಗಳು ಬಾಡಿಗೆ ಮನೇಲಿ ಇರ್ರಿ, ಆಮೇಲೆ ನಿಮಗೆ ಮನೆಗಳನ್ನು ನೀಡುತ್ತೇನೆ ಎನ್ನುತ್ತಾರೆ. ಸಿಂದಗಿ ಪಟ್ಟಣದಲ್ಲಿ ಬಾಡಿಗೆ ಹಿಡಿದು ಬದುಕು ಸಾಗಿಸುವುದು ಅಷ್ಟು ಸುಲಭವಲ್ಲ. ನಮಗೆ ಮೊದಲು ಸೂರು ಕಲ್ಪಿಸಿ ಆಮೇಲೆ ತೆರವುಗೊಳಿಸಿ ಎಂದು ಆಗ್ರಹಿಸಿದರು.

ಈ ವೇಳೆ ಒಬಿಸಿ ಜಿಲ್ಲಾಧ್ಯಕ್ಷ ಸಿದ್ದು ಬುಳ್ಳಾ ಮಲ್ಲಿಕಾರ್ಜುನ ಪಡಶೆಟ್ಟಿ, ಗುರು ತಳವಾರ, ಶ್ರೀಕಾಂತ ಬಿಜಾಪುರ, ಶಂಕರ ಬಗಲಿ ಮಾತನಾಡಿದರು.

ಪ್ರತಿಭಟನೆಯಲ್ಲಿ ಪ್ರಶಾಂತ ಕದ್ದರಕಿ, ವಿಠ್ಠಲ ನಾಯ್ಕೋಡಿ, ಶ್ರೀಶೈಲ ಚಳ್ಳಗಿ, ಮಹಾಂತೇಶ ಸಾತಿಹಾಳ, ಪೀರೂ ಕೆರೂರ, ಶಮೀರ್ ಬಿಜಾಪೂರ, ಮಲ್ಲು ಪೂಜಾರಿ, ಮಡು ಬೋನಾಳ, ಸಿಂದಗಿ ಬಿಜೆಪಿ ವಕ್ತಾರ ಶಿವಕುಮಾರ ಬಿರಾದಾರ, ರವಿ ನಾಯ್ಕೋಡಿ, ಶಿವನಗೌಡ ಬಿರಾದಾರ, ಪ್ರಶಾಂತ ಕದ್ದರಕಿ, ಸಂತೋಷ ಮಣಗೀರಿ, ಪೀರೂ ಕೆರೂರ, ನಾಗಪ್ಪ ಶಿವೂರ, ಸಿದ್ರಾಮ ಆನಗೊಂಡ, ಮಡಿವಾಳಪ್ಪಗೌಡ ಬಿರಾದಾರ, ಶ್ರೀಶೈಲ ಚಳ್ಳಗಿ, ಮಲ್ಲನಗೌಡ ಬಿರಾದಾರ, ಯಲ್ಲು ಇಂಗಳಗಿ, ಪ್ರಧಾನಿ ಮೂಲಿಮನಿ, ಸಾಯಬಣ್ಣ ದೇವರಮನಿ, ಸಿದ್ರಾಮ ಆನಗೊಂಡ, ಮಲ್ಲಪ್ಪ ಜಾಲವಾದಿ, ಸಂಜೀವ ಹೋಳಿ, ಅಮೀನ ಬಡಿಗೇರ, ಕಾಂತಮ್ಮ ಚಾಂದಕವಟೆ, ಮೈರುನ ಮಣೂರ, ರೇಣುಕಾ ಮಾದರ, ಲಕ್ಷ್ಮೀ ಮಾದರ, ಯಮುನಾಬಾಯಿ ತಿಳಗೂಳ, ಅನ್ನಪೂರ್ಣ ಪಟ್ಟಣಶೆಟ್ಟಿ, ರೇಣುಕಾ ತಳವಾರ ಸೇರಿದಂತೆ ಬಿಜೆಪಿ ಮಂಡಲದ ಪದಾಧಿಕಾರಿಗಳು, ಕಾರ್ಯಕರ್ತರು, ಮುಖಂಡರು ಹಾಗೂ ವಾರ್ಡ ನಂ13ರ ಸ್ಲಂ ನಿವಾಸಿಗಳು ಇದ್ದರು.

**ಸಿಂದಗಿಯ ರೈತ ಭವನ ಆವರಣದಲ್ಲಿ ಉದ್ಘಾಟಿಸಿದ ಶಾಸಕ ಅಶೋಕ ಮನಗೂಳಿ**

# ಯೋಜನಾ ಪ್ರಾಧಿಕಾರದ ನೂತನ ಕಚೇರಿ ಉದ್ಘಾಟನೆ

**ಉದಯರಶ್ಮಿ ನ್ಯೂಸ್**

ಸಿಂದಗಿ: ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಸಿಂದಗಿ ನಗರಕ್ಕೆ ನಗರ ಯೋಜನೆ ಪ್ರಾಧಿಕಾರ ಅವಶ್ಯಕತೆ ಇತ್ತು ಎಂದು ಅಶೋಕ್ ಮನಗೂಳಿ ಹೇಳಿದರು.

ಪಟ್ಟಣದ ಎಪಿಎಂಸಿ ಯಾರ್ಡ್ ರೈತ ಭವನದಲ್ಲಿ ಹಮ್ಮಿಕೊಂಡ ನಗರ ಯೋಜನಾ ಪ್ರಾಧಿಕಾರ ನೂತನ ಕಚೇರಿಯನ್ನು ಶಾಸಕ ಅಶೋಕ ಮನಗೂಳಿ ರಿಬ್ಬನ್ ಕತ್ತರಿಸುವ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು, ಶಿಕ್ಷಣ, ಧಾರ್ಮಿಕ, ಸಮಾಜಿಕ ಮತ್ತು ಉದ್ಯೋಗ ಸೇರಿದಂತೆ ಪ್ರತಿಯೊಂದು ರಂಗದಲ್ಲಿ ವೇಗವಾಗಿ ಬೆಳೆಯುತ್ತಿರುವ ಪಟ್ಟಣ ಈ ಜಿಲ್ಲೆಯಲ್ಲಿ ಯಾವುದಾದರೂ ಇದ್ದರೆ ಅದು ಸಿಂದಗಿ. ಈ ಯೋಜನಾ ಪ್ರಾಧಿಕಾರದಿಂದ ನಮಗಿರುವ ಪ್ರಯೋಜನವೆಂದರೆ ಸಿಂದಗಿ ಪುರಸಭೆಯನ್ನು ನಗರಸಭೆಯನ್ನಾಗಿ ಮಾಡಲು ಸರಕಾರಕ್ಕೆ ಒತ್ತಾಯ ಮಾಡಲು



ಅನುಕೂಲವಾಗುತ್ತದೆ. ಗ್ರಾಹಕ ಮಿತ್ರರು ಎನ್‌ಎ ಅಥವಾ ಯಾವುದೇ ಕಾರ್ಯಕ್ಕಾಗಿ ವಿಜಯಪುರಕ್ಕೆ ಹೋಗಬೇಕಾಗುತ್ತಿತ್ತು. ಸುಗಮವಾಗಿ ಕಾರ್ಯವಾಗಲಿ, ಪುರಸಭೆಯ ಆದಾಯ ಇನ್ನೂ ಹೆಚ್ಚಾಗಲಿ ಎಂಬ ದೃಷ್ಟಿಕೋನ ಇಟ್ಟುಕೊಂಡು ಯೋಜನಾ ಪ್ರಾಧಿಕಾರವನ್ನು ಮಂಜೂರು ಮಾಡಿಸಲಾಗಿದೆ ಎಂದರು.

ಈ ವೇಳೆ ವಿಜಯಪುರ ಯೋಜನಾ ಪ್ರಾಧಿಕಾರದ ಸಹಾಯಕ ನಿರ್ದೇಶಕ, ರವೀಂದ್ರ ಹೇರಲಗಿ ಮಾತನಾಡಿ, ಪಟ್ಟಣದಲ್ಲಿ ಯೋಜನಾ ಪ್ರಾಧಿಕಾರ ಪ್ರಾರಂಭಿಸಿದ್ದು ಜನರಿಗೆ ಅನುಕೂಲವಾಗಿದೆ. ಯೋಜನಾ ಪ್ರಾಧಿಕಾರದಲ್ಲಿ ಕಾರ್ಯನಿರ್ವಹಿಸಲು ಸಿಬ್ಬಂದಿಗಳನ್ನು ನೀಡಬೇಕು ಎಂದು ಮನವಿ ಮಾಡಿಕೊಂಡರು.

ಆಗ ಶಾಸಕರು ಯೋಜನಾ ಪ್ರಾಧಿಕಾರಕ್ಕೆ ಆದಷ್ಟು ಬೇಗ ಸಿಬ್ಬಂದಿ ನಿಯೋಜನೆ ಮಾಡುವ ಭರವಸೆ ನೀಡಿದರು.

ಇದೇ ಸಂದರ್ಭದಲ್ಲಿ ಪುರಸಭೆ ಮಾಜಿ ಅಧ್ಯಕ್ಷ, ಹಾಲಿ ಸದಸ್ಯ ಹಣಮಂತ ಸುಣಗಾರ ಮಾತನಾಡಿದರು.

ಪುರಸಭೆ ಮುಖ್ಯಾಧಿಕಾರಿ ಗುರುರಾಜ ಚೌಕಿಮಠ, ಪುರಸಭೆ ಸದಸ್ಯರಾದ ಪ್ರತಿಭಾ ಕಲ್ಲೂರ್, ಸಂದೀಪ್ ಚೌರ್, ಬಸವರಾಜ ಯರನಾಳ, ಶ್ರೀಶೈಲ ಬೀರಗೊಂಡ, ಆನಂದ ಡೋಣೂರ, ಮಲ್ಲಿಕಾರ್ಜುನ ಶಂಭೇವಾಡ, ರಾಜು ಖೇಡ, ರಜತ ತಾಂಬೆ, ಸುನಂದಾ ಯಂಪುರೆ, ಗಿರೀಶ ನಾಗೂರ, ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಪುರಸಭೆ ಸದಸ್ಯರು, ಪಕ್ಷದ ಮುಖಂಡರು, ಹಿರಿಯರು, ಕಾರ್ಯಕರ್ತರು ಉಪಸ್ಥಿತರಿದ್ದರು.

**ಬಿಸಿ ಗಾಳಿಗೆ ಜನ ಹೈರಾಣ | ಧಗೆ ತಣಿಸಲು ಪಾನೀಯಗಳ ಮೊರೆ | ರಸ್ತೆಗೆ ಇಳಿಯಲು ಜನರು ಹಿಂದೇಟು**

# ರಣಬಿಸಿಲಿಗೆ ತತ್ತರಿಸಿದ ಗಿರಿನಾಡು ಜನತೆ

**ಉದಯರಶ್ಮಿ ನ್ಯೂಸ್**

– ಇಲಿಯಾಸ್ ಪಟೇಲ್ .ಬ

ಯಾದಗಿರಿ: ಗಿರಿನಾಡು ಎಂದೇ ಹೆಸರುವಾಸಿಯಾಗಿರುವ ಯಾದಗಿರಿ ಜಿಲ್ಲೆಯಲ್ಲಿ ಈ ಬಾರಿಯೂ ಬಿಸಿಲಿನ ತಾಪಮಾನ ಹೆಚ್ಚಾಗಿದ್ದು, ಸೂರ್ಯ ಜನರ ನೆತ್ತಿ ಸುಡುವುದರ ಜೆಣಟಿಜಜಜಿಟಿಜಜತೆಗೆ ಮೈಬೆವರನ್ನು ಇಳಿಸುತ್ತಿದ್ದಾನೆ.


ಬೇಸಿಗೆ ಬಿಸಿಯ ಉಷ್ಣಾಂಶ ಹೆಚ್ಚಳವಾಗಿರುವ ಹಿನ್ನೆಲೆ ಬೇಸಿಗೆಯಿಂದ ಜನರು ದಣಿವಾರಿಸಿ ಕೊಳ್ಳಲು ತಂಪು ಪಾನೀಯ ಹಾಗೂ ಎಳನೀರಿನ ಮೊರೆ ಹೋಗುತ್ತಿದ್ದು, ಅವುಗಳಿಗೆ ಬೇಡಿಕೆ ಹೆಚ್ಚಾಗುತ್ತಿದೆ.



ಯಾದಗಿರಿ, ಶಹಾಪುರ, ಸುರಪುರ, ಹುಣಸಗಿ ಹೀಗೆ ಹಲವಾರು ಕಡೆಯ ಜನತೆ ರಣ ಬಿಸಿಲಿಗೆ ತತ್ತರಿಸಿ ಹೋಗಿದ್ದಾರೆ ಅಂತಾನೇ ಹೇಳಬಹುದು. ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು, ಸೂರ್ಯನ ಧಗೆ ಜನರ ನೆತ್ತಿಸುಡುತ್ತಿದೆ. ಇದರಿಂದ ಜನರು ನಿತ್ರಾಣವಾಗಿ ದಾಹ ನೀಗಿಸಿಕೊಳ್ಳಲು ತಂಪು ಪಾನೀಯಗಳಾದ ಕಬ್ಬಿನ ಹಾಲು, ಎಳೆನೀರು, ಮಜ್ಜಿಗೆ, ನಿಂಬೆಹಣ್ಣಿನ ಜ್ಯೂಸ್ ಗಳಂತಹ ಪಾನೀಯಗಳ ಮೊರೆ ಹೋಗುತ್ತಿದ್ದಾರೆ.

ಬಿಸಿಲಿನ ಜತೆಗೆ ಬಿಸಿ ಗಾಳಿಯೂ ಸಹ ಜನರನ್ನು ತತ್ತರಿಸುವಂತೆ ಮಾಡಿದೆ. ನಾಗರಿಕರು ಬಿಸಿಲಿನ ತಾಪಕ್ಕೆ ದಣಿವಾರಿಸಲು ಎಳೆನೀರು ಕುಡಿದು ದೇಹವನ್ನು ತಂಪಾಗಿಸಿಕೊಳ್ಳುತ್ತಿರುವುದು ಸಾಮಾನ್ಯವಾಗಿ ಕಂಡುಬರುತ್ತಿದೆ. ಎಳೆನೀರಿನ ಬೆಲೆ ಹೆಚ್ಚಾಗಿದ್ದರೂ, ಬಿಸಿಲಿನ ತಾಪವನ್ನು ತಗ್ಗಿಸಿಕೆಳ್ಳಲು ಅದರ ಮತ್ತು ತಂಪು ಪಾನಿಯ ಹಾಗೂ ಕಬ್ಬಿನ ರಸಕ್ಕೆ ಮೊರೆ ಹೋಗುತ್ತಿದ್ದಾರೆ. ಈ ಬಾರಿ ರಣ ಬಿಸಿಲಿನಿಂದ ನೆತ್ತಿ ಸುಡುತ್ತಿದ್ದು ಬರುವ ದಿನಗಳಲ್ಲಿ ಬಿಸಿಲಿನ ತಾಪ ಮತ್ತಷ್ಟು ತೀವ್ರಗೆಣಟಿಜಜಜಿಟಿಜಜಳ್ಳಲಿದೆ.

ಮನೆಯಿಂದ ಹೊರ ಬರಲು ಜನರು ಹಿಂದೇಟು ಯಾದಗಿರಿ ಜಿಲ್ಲೆಯಲ್ಲಿ ಸದ್ಯ ಸಂಜೆ 5ಗಂಟೆಯವರೆಗೆ 38 ಡಿಗ್ರಿ ಸೆಲ್ಸಿಯಸ್ ತಾಪ ಮಾನವಿದ್ದು, ಬಿಸಿಲಿನ ಜಳ ಜನರ ಬೆವರಿಳಿಸುತ್ತಿದೆ. ಮಕ್ಕಳು, ಮಹಿಳೆಯರು, ವಯೋವೃದ್ದರು ಬಿಸಿಲಿನ ಪರಿಣಾಮ ಹೊರಗೆ ಬರಲು ಹಿಂದೇಟು ಹಾಕುತ್ತಿದ್ದಾರೆ. ವಿವಿಧ ಕಾರ್ಯದ ನಿಮಿತ್ತ ಹೊರ ಬರುವ ಜನರು ಛತ್ರಿಗೆ ಮೊರೆ ಹೋಗಿದ್ದಾರೆ. ಗ್ರಾಮೀಣ ಪ್ರದೇಶದ



ಜನರು ನೆರಳಿಗೆ ಹೊಂಗೆ ಮರವನ್ನು ಆಶ್ರಯಿಸುತ್ತಿದ್ದಾರೆ. ಜಿಲ್ಲೆಯಲ್ಲಿಯೇ ಕಳೆದ ವರ್ಷಕ್ಕಿಂತ ಕಡಿಮೆ ಪ್ರಮಾಣದ ಮಳೆಯಾಗಿದ್ದು, ಕೆರೆ, ಕುಂಟೆಗಳಲ್ಲಿ ನೀರಿನ ಪ್ರಮಾಣ ಕಡಿಮೆಯಾಗಿದೆ. ಹಿಂದಿನ ವರ್ಷಗಳಿಗೆ ಹೋಲಿಸಿದರೆ ಕುಡಿಯುವ ನೀರಿಗೆ ಸದ್ಯದ ಪರಿಸ್ಥಿತಿಯಲ್ಲಿ ಬೆರಳೆಣಿಕೆ ಗ್ರಾಮಗಳಲ್ಲಿ ಸಮಸ್ಯೆಯಿದೆ. ಆದರೆ ಬಿಸಿಲಿನ ಆರ್ಭಟ ಮಾತ್ರ ಜನರನ್ನು ತಲ್ಲಣಗೊಳಿಸಿದೆ. ಇನ್ನೂ ಬೇಸಿಗೆ ಬಿಸಿಲು ಹೆಚ್ಚಾಗುತ್ತಿರುವುದರಿಂದ ನೀರಿನ ಸಮಸ್ಯೆ ಒಂದೆಡೆಯಾದರೆ, ಪಾನೀಯಗಳ ಬೆಲೆಯೂ ದುಬಾರಿಯಾಗುತ್ತಿದೆ.

ಹೆಚ್ಚುತ್ತಿರುವ ಬಿಸಿಲಿನ ಕಾವು ಆರಂಭದಲ್ಲೆ ಉರಿಬಿಸಿಲಿನ ಅನುಭವಕ್ಕೆ ಬೆಚ್ಚಿ ಬೀಳುತ್ತಿರುವ ನಾಗರಿಕರು ಪ್ರಾರಂಭದಲ್ಲಿ ಹೀಗಾದರೆ, ಏಪ್ರಿಲ್, ಮೇ ತಿಂಗಳು ಹೇಗಪ್ಪಾ ಕಳೆಯುವುದು ಎಂಬ ಚಿಂತೆ ಜನರಲ್ಲಿ ಮನೆ ಮಾಡಿದೆ.

## ಮಜ್ಜಿಗೆಗೆ ಸಾಕಷ್ಟು ಬೇಡಿಕೆ

ಬೇಕರಿ, ಹೋಟೇಲ್ ಗಳಲ್ಲಿ ತಂಪು ಪಾನಿಯಗಳ ಮಾರಾಟ ಗಣನೀಯವಾಗಿ ಹೆಚ್ಚಿದೆ. ಮಜ್ಜಿಗೆಗೆ ಸಾಕಷ್ಟು ಬೇಡಿಕೆ ಕಂಡುಬರುತ್ತಿದೆ. ಬಿಸಿಲಿನ ತಾಪ ಹೆಚ್ಚಾದಂತೆ ರೋಗ–ರುಜಿನುಗಳು ಮನೆ ಮಾಡುತ್ತವೆ. ರಸ್ತೆ ಬದಿಯಲ್ಲಿ ಮಜ್ಜಿಗೆ ಹಾಗೂ ಹೆಸರುಬೇಳೆ, ಕೋಸಂಬರಿ ಮಾರಾಟದ ಅಂಗಡಿಗಳು ತಲೆಎತ್ತುತ್ತಿವೆ. ಕತ್ತರಿಸಿಟ್ಟ ಹಣ್ಣುಗಳು ಯತೇಚ್ಛವಾಗಿ ದೊರೆಯುತ್ತಿದೆ. ಬಿಸಿಲ ಝಳಕ್ಕೆ ಮಧ್ಯಾಹ್ನದ ವೇಳೆ ರಸ್ತೆಗೆ ಇಳಿಯಲು ಜನರು ಹಿಂದೇಟು ಹಾಕುತ್ತಿದ್ದಾರೆ.



“ಈ ಬಾರಿ ಬಿಸಿಲಿನ ತಾಪಮಾನ ಹೆಚ್ಚಾಗಿದೆ. ಮಧ್ಯಾಹ್ನದ ವೇಳೆಯಂತೂ ಮರದ ನೆರಳನ್ನು ಹುಡುಕುವ ಪರಿಸ್ಥಿತಿ ನಿರ್ಮಾಣವಾಗಿದೆ. ಬರೀ ತಲೆಯಲ್ಲಿ ಹೊರಗಡೆ ಹೋದರೆ, ಬಿಸಿಲಿನ ತಾಪಕ್ಕೆ ತಲೆನೋವು ಬರುವ ಸಾಧ್ಯತೆ ಹೆಚ್ಚಾಗುತ್ತದೆ. ಬೇರೆ ದೇಶದ, ಆರೋಗ್ಯಕ್ಕೆ ಹಿತಕರವಲ್ಲದ ಕೋಕಾಕೋಲ, ಪೆಪ್ಸಿಯಂತಹ ತಂಪು ಪಾನೀಯ ಕುಡಿಯುವುದರ ಬದಲು ಆರೋಗ್ಯದ ದೃಷ್ಟಿಯಿಂದ ಉತ್ತಮವಾಗಿರುವ ಎಳನೀರು ಕುಡಿದರೆ ರೈತರಿಗೂ ಮತ್ತು ಸ್ಥಳೀಯ ವ್ಯಾಪಾರಿಗಳಿಗೆ ನೆರವಾಗುತ್ತದೆ.

– ಲಾಲಸಾಬ್, ಉಸ್ತಾದ, ಯುವ ಮುಖಂಡರು

# ದೇಗುಲ ಜೀರ್ಣೋದ್ಧಾರ ಭೂಮಿಪೂಜೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ನಗರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಅವರ ಶಾಸಕರ ಪ್ರದೇಶಾಭಿವೃದ್ಧಿ ನಿಧಿಯಲ್ಲಿ ರೂ.5 ಲಕ್ಷ ಅನುದಾನದಲ್ಲಿ ವಾರ್ಡ ನಂ.11 ರಲ್ಲಿ ಬರುವ ಶ್ರೀ ಹನುಮಾನ ದೇವಸ್ಥಾನ ಜೀರ್ಣೋದ್ಧಾರ ಕಾಮಗಾರಿಗೆ ಶನಿವಾರ ಭೂಮಿಪೂಜೆ ನೆರವೇ–ರಿಸಲಾಯಿತು.



ಮಹಾನಗರ ಪಾಲಿಕೆ ಸದಸ್ಯರಾದ ವಿಠ್ಠಲ ಹೊಸಪೇಟ, ಮುಖಂಡರಾದ ಅಶೋಕ ಬೆಲ್ಲದ, ಶಂಕರ ಚಲವಾದಿ, ರಮೇಶ ಪಡಸಲಗಿ, ಭೀಮಸಿ ತಳಕೇರಿ, ಮಹೇಶ ವಾಂಡಕರ, ಆನಂದ ಚೋರಗಿ, ರಾಜು ರಣದೇವಿ, ಅಶೋಕ ಹಂಚಿನಾಳ, ಪ್ರದೀಪ ಚಲವಾದಿ, ಸದಾಶಿವ, ದತ್ತು, ಶ್ರೀಧರ ದೇವರ ಮತ್ತಿತರರು ಇದ್ದರು.

# ಬಿಜೆಪಿ ಪದಾಧಿಕಾರಿಗಳ ನೇಮಕ

**ಉದಯರಶ್ಮಿ ನ್ಯೂಸ್**

ವಿಜಯಪುರ: ಜಿಲ್ಲಾ ಅಧ್ಯಕ್ಷರ ಸೂಚನೆ ಮೇರೆಗೆ ಬಿಜೆಪಿ ನಗರ ಮಂಡಲದ ಯುವ ಮೋರ್ಚಾ, ಎಸ್.ಸಿ ಮೋರ್ಚಾ ಹಾಗೂ ಎಸ್.ಟಿ ಮೋರ್ಚಾ ಈ ಕೆಳಕಂಡ ಮುಖಂಡರನ್ನು ಪದಾಧಿಕಾ–ರಿಗಳನ್ನಾಗಿ ನೇಮಕ ಮಾಡಿ ನಗರ ಮಂಡಲ ಅಧ್ಯಕ್ಷ ಶಂಕರ ಹೂಗಾರ ಆದೇಶ ಹೊರಡಿಸಿದ್ದಾರೆ.

ಯುವ ಮೋರ್ಚಾ: ಉಪಾಧ್ಯಕ್ಷರು ದತ್ತಾ ಗೋಲಾಂಡೆ, ಗವಿಸಿದ್ದೇಶ ಅವಟಿ, ರಾಹುಲ್ ಗುಪ್ತಾ, ನೀತಿನಕುಮಾರ ಹಳ್ಳಿ, ವಿಜಯಕುಮಾರ್ ಆಜೂರ, ಕಾರ್ಯದರ್ಶಿಗಳು ಬಸವಕುಮಾರ ಕಾಂಬಳೆ, ವಿಠ್ಠಲ ಗಾಯಕವಾಡ, ಅವಿನಾಶ ಮಹಿಂದ್ರಕರ, ಪ್ರೇಮಕುಮಾರ ಕಲಕುಟಗಿ, ಸಚೀನ ಘಾಟಗೆ, ಕೋಶಾಧ್ಯಕ್ಷರು ಗಿರೀಶ ಬಿರಾದಾರ.

ಎಸ್.ಸಿ ಮೋರ್ಚಾ: ಉಪಾಧ್ಯಕ್ಷರು ಮಡಿವಾಳ ಯಾಳವಾರ, ಮಾನಸಿಂಗ್ ರಾಠೋಡ, ಕೃಷ್ಣ (ಅಪ್ಪು) ಅಲಕುಂಟೆ, ಬಸವರಾಜ ಕಾಂಬಳೆ, ಸುಖದೇವ ಗಾಯಕವಾಡ, ಕಾರ್ಯದರ್ಶಿಗಳು ಶ್ರೀಕಾಂತ ಗಚ್ಚಿನಮನಿ, ಪರಶುರಾಮ ಕುಂಚಿಕೊರವರ, ಕಿಶೋರ ಚವ್ಹಾಣ, ಈರಪ್ಪ ಚಲವಾದಿ (ವಾಲಿಕಾರ), ಅನೀಲ ಬಂಡಿವಡ್ಡರ, ಸದಾನಂದ ಗುನ್ನಾಪೂರ, ಕೋಶಾಧ್ಯಕ್ಷರು ಶ್ರೀಮಂತ ಚವ್ಹಾಣ.

ಎಸ್.ಟಿ ಮೋರ್ಚಾ: ಉಪಾಧ್ಯಕ್ಷರು ಉಮೇಶ ಗೊಳಸಂಗಿ, ಕೆ.ಎಚ್.ವೀರಣ್ಣ, ಕೃಷ್ಣಾ ರಾಠೋಡ, ಅಪ್ಪಾಸಿ ಕೋಲಕಾರ, ಹಣಮಂತ ಜಕ್ಕಣ್ಣವರ, ಕಾರ್ಯದರ್ಶಿಗಳು ವಿಶಾಲ ರೋಹಿತೆ, ಸಂತೋಷ ತಟಗಾರ, ಪುಂಡಲೀಕ ವಾಲಿಕಾರ, ಅಶೋಕ ಅಲ್ಲಾಪೂರ, ಶ್ರೀಕಾಂತ ಬಾಗೇವಾಡಿ, ಕೋಶಾಧ್ಯಕ್ಷರು ಸಚೀನ ವಾಲಿಕಾರ ಅವರನ್ನು ನೇಮಕ ಮಾಡಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೆರೆಗೆ ಬಾಗಿನ ಅರ್ಪಣೆ । ಗ್ರಾಮಸ್ಥರ ಹರ್ಷ । ಶಾಸಕ ಮನಗೂಳಿ ಭರವಸೆ

# ಮೋರಟಗಿ ಕೆರೆ ಅಭಿವೃದ್ಧಿಗೆ ರೂ.2 ಕೋಟಿ ಅನುದಾನ

**ಉದಯರಶ್ಮಿ ನ್ಯೂಸ್**

ಮೋರಟಗಿ: ಗ್ರಾಮದ ಕೆರೆ ಅಭಿವೃದ್ಧಿಪಡಿಸಲು 2 ಕೋಟಿ ರೂ.ಅನುದಾನ ಮಂಜೂರು ಮಾಡಿಸಲಾಗುವುದು ಎಂದು ಸಿಂದಗಿ ಶಾಸಕ ಅಶೋಕ ಮನಗೂಳಿ ಹೇಳಿದರು.

ಶನಿವಾರ ಗ್ರಾಮದ 14 ಎಕರೆ 26 ಗುಂಟೆ ವಿಶಾಲ ಕೆರೆಗೆ ನೀರು ಹರಿಸಿದ ಪ್ರಯುಕ್ತ ಶನಿವಾರ ಬಾಗಿನ ಅರ್ಪಿಸಿ ಅವರು ಮಾತನಾಡಿದರು.



ಬೇಸಿಗೆಯಲ್ಲಿ ಗ್ರಾಮಸ್ಥರ ಕುಡಿವ ನೀರಿನ ಬವಣೆ ತಪ್ಪಿಸಲು ಕೆರೆಗೆ ನೀರು ಹರಿಸುವಂತೆ ಗ್ರಾಪಂ ಅಧಿಕಾರಿಗಳು ಹಾಗೂ ಹಿರಿಯರು ವಿನಂತಿಸಿದ್ದರು. ಅವರ ಕೋ–ರಿಕೆಯಂತೆ ಕೆರೆ ತುಂಬಿಸಲು ಕ್ರಮ ಕೈಗೊಳ್ಳಲಾಗಿದೆ. ಕಂದಾಯ ಇಲಾಖೆ ಅಧಿಕಾರಿಗಳು, ತಹಸೀಲ್ದಾರ್, ಗ್ರಾಪಂ ಅಧಿಕಾರಿಗಳು ಕೆರೆ ತುಂಬಿಸಲು ಸಾಕಷ್ಟು ಶ್ರಮಿಸಿದ್ದಾರೆ. ಚುನಾವಣೆ ನಂತರ ಅನುದಾನ ಮಂಜೂರು ಮಾಡಿಸಿ ಕೆರೆಯ ನಾಲ್ಕು ಬದಿಗೆ ಒಡ್ಡು ಹಾಕಿ ಅಭಿವೃದ್ಧಿಪಡಿಸುವ ಜತೆಗೆ ಕೆರೆ ದಾರಿ ಡಾಂಬರೀಕರಣಕ್ಕೆ ಕ್ರಮ ಕೈಗೊಳ್ಳಲಾಗುವುದು ಎಂದರು.

ಕರ್ನಾಟಕದ 236 ತಾಲೂಕುಗಳಲ್ಲಿ 214 ತಾಲೂಕುಗಳನ್ನು ಸರ್ಕಾರ ಬರ ಪೀಡಿತ ಎಂದು ಘೋಷಿಸಿದೆ. ಇಂಥ ಸ್ಥಿತಿಯಲ್ಲಿ ಗ್ರಾಮೀಣ ಭಾಗದ ಜನ, ಜಾನುವಾರುಗಳಿಗೆ ಕುಡಿವ ನೀರು ಒದಗಿಸಬೇಕು ಎಂಬ ಕಳಕಳಿಯಿಂದ ಸರ್ಕಾರ ಕೆರೆ ತುಂಬಿಸುವ ಯೋಜನೆಗೆ ಮುಂದಾಗಿದೆ.

ಕೃಷ್ಣಾ ಭಾಗ್ಯ ಜಲನಿಗಮದ ಅಧಿಕಾರಿಗಳೊಂದಿಗೆ ಚರ್ಚಿಸಿ ಈ ಭಾಗದ ಕೆರೆಗಳಿಗೂ ನೀರು ಹರಿಸುತ್ತಿದೆ. ಆಲಮಟ್ಟಿ ಜಲಾಶಯದಲ್ಲಿ 32 ಟಿಎಂಸಿ ನೀರು ಇದ್ದು, ಗುತ್ತಿಬಸವಣ್ಣ ಏತ ನೀರಾವರಿ ಹಾಗೂ ಐಬಿಸಿ ಕೆನಾಲ್‌ಗೆ ಸತತವಾಗಿ 8 ದಿನಗಳಿಂದ ನೀರು ಹರಿಸಲಾಗುತ್ತಿದೆ. ಅಗತ್ಯಕ್ಕೆ ಅನುಗುಣವಾಗಿ ಮೇ ತಿಂಗಳಲ್ಲಿ ಮತ್ತೆ ನೀರು ಹರಿಸಲಾಗುವುದು ಎಂದರು.

ಸಿಂದಗಿ ಜನತೆ ಕುಡಿವ ನೀರಿಗೆ ತೊಂದರೆ ಆಗದಿರಲಿ ಎಂದು ಪಟ್ಟಣದ 54 ಎಕರೆ ಕೆರೆಗೆ ಬಳಗಾನೂರ ಕೆರೆ ಹಾಗೂ ಯರಗಲ್ ಬಿಕೆ ಹತ್ತಿರದ ಕೆನಾಲ್‌ನಿಂದ ಪೈಪ್‌ಲೈನ್ ಮಾಡಿಸಿ ನೀರು ತುಂಬಿಸಲಾಗುತ್ತಿದೆ. ಆಲಮೇಲ ಪಟ್ಟಣದ 74 ಎಕರೆ ಕೆರೆ ಅಭಿವೃದ್ಧಿಗೆ ಮೂರುವರೆ ಕೋಟಿ ರೂ., ಹಂದಿಗನೂರು ಗ್ರಾಮದಲ್ಲಿ ಕೆರೆ ನಿರ್ಮಿಸಲು 2 ಕೋಟಿ ರೂ.ಮಂಜೂರು ಮಾಡಿಸಿ ಕೆರೆ ನಿರ್ಮಿಸಲಾಗಿದೆ. ಸಿಂದಗಿಯಲ್ಲಿ 9 ಬಾವಿ ಸಂಪೂರ್ಣ ಹಾಳು ಬಿದ್ದಿದ್ದವು. 30 ಲಕ್ಷ ರೂ. ಮಂಜೂರು ಮಾಡಿಸಿ ಮೂರು ಬಾವಿಗಳ ಪುನರುಜ್ಜೀವನಕ್ಕೆ ಕ್ರಮ ಕೈಗೊಳ್ಳಲಾಗಿದೆ ಎಂದರು.

ಜಿಪಂ ಮಾಜಿ ಸದಸ್ಯ ಎನ್. ಆರ್.ತಿವಾರಿ ಮಾತನಾಡಿ, ಗ್ರಾಪಂ ಅಧ್ಯಕ್ಷ, ಉಪಾಧ್ಯಕ್ಷರು, ಸದಸ್ಯರು ಮತ್ತು ಗ್ರಾಮದ ಹಿರಿಯರಾದ ಮಹಿಬೂಬಸಾಬ್ ಕಣ್ಣಿ, ಮುತ್ತಪ್ಪ ಸಿಂಗೆ ಮತ್ತಿತರರು ಸೇರಿ ಶಾಸಕರನ್ನು ಭೇಟಿಯಾಗಿ ನೀರಿನ ಸಮಸ್ಯೆಗೆ ಸ್ಪಂದಿಸುವಂತೆ ವಿನಂತಿಸಿದಾಗ ಶಾಸಕರು ಕೂಡಲೇ ಕೆಬಿಜೆಎನ್ ಅಧಿಕಾರಗಳೊಂದಿಗೆ ಮಾತನಾಡಿ ಮುಖ್ಯ ಕಾಲುವೆಗೆ ನೀರು ಬಿಡಿಸಿ ಕೆರೆ ತುಂಬಿಸುವ ಕಾರ್ಯಕ್ಕೆ ಮುಂದಾದರು.

5 ದಿನಗಳಿಂದ ಮುಖ್ಯ ಕೆನಾಲ್‌ನಿಂದ ಕಾಲುವೆ ನಿರ್ಮಿಸಿ ಕೆರೆ ತುಂಬಲಾಗುತ್ತಿದ್ದು, ಅಂತರ್ಜಲ ಹೆಚ್ಚಾಗಿ 3 ಬಾವಿ, 8 ಬೋರ್‌ವೆಲ್ ಪುನಶ್ಚೇತನಗೊಂಡಿವೆ. ಎರಡು ದಿನಗಳಲ್ಲಿ ಕೆರೆ ಸಂಪೂರ್ಣ ತುಂಬಲಿದೆ. ಗ್ರಾಮಸ್ಥರು ಶಾಸಕರ ಕಳಕಳಿ ಬಗ್ಗೆ ಹರ್ಷ ವ್ಯಕ್ತಪಡಿಸುತ್ತಿದ್ದಾರೆ ಎಂದರು.

ಕೆಬಿಜೆಎನ್‌ಎಲ್ ಕಾರ್ಯ ನಿರ್ವಾಹಕ ಅಧಿಕಾರಿ ವಿಜಯಕುಮಾರ್, ಕೆಡಿಪಿ ಸದಸ್ಯ ಎನ್.ಎನ್.ಪಾಟೀಲ, ರವಿಕಾಂತ ನಡುವಿನಕೇರಿ, ಯುಸೂಫ್ ಮುಲ್ಲಾ, ವೀರನಗೌಡ ಪಾಟೀಲ, ರಜಾಕ್ ಬಾಗವಾನ್, ಸಲೀಮ್ ಕಣ್ಣಿ, ಇನಾಯತ್ ದೊಡಮನಿ, ಸಿದ್ದು ಮುಂದೇವಾಲಿ, ಧರ್ಮರಾಜ ಯಂಟಮನ, ಸಿದ್ದು ಶೀಲವಂತ, ಮಲ್ಲು ದುದ್ದಗಿ, ಬಂದೇನವಾಜ್ ಕಣ್ಣಿ, ಜೆ.ಕೆ.ನೆಲ್ಲಗಿ, ಹುಸೇನ್‌ಬಾಷಾ ಬಾಗವಾನ್, ಶಕೀಲ ಮುಲ್ಲಾ, ಹಸನಸಾಬ್ ಶಿರಷ್ಯಾಡ, ಗ್ರಾಪಂ ಸಿಬ್ಬಂದಿ, ಸರ್ವ ಸದಸ್ಯರು, ಗ್ರಾಮಸ್ಥರು ಇದ್ದರು.

> "ಮೋರಟಗಿ ಗ್ರಾಮದ ಸಿಸಿ ರಸ್ತೆಗೆ 50 ಲಕ್ಷ ರೂ., ಸಿದ್ದರಾಮೇಶ್ವರ ದೇವಸ್ಥಾನಕ್ಕೆ 15 ಲಕ್ಷ ರೂ., ವೀರಭದ್ರೇಶ್ವರ ದೇವಸ್ಥಾನಕ್ಕೆ 5 ಲಕ್ಷ ರೂ., ಶಾದಿಮಹಲ್‌ಗೆ 1 ಕೋಟಿ ರೂ. ಮಂಜೂರು ಮಾಡಲಾಗಿದೆ. ಮುಂದಿನ ದಿನಗಳಲ್ಲಿ ಗ್ರಾಮವನ್ನು ಮಾದರಿ ಗ್ರಾಮವನ್ನಾಗಿ ಮಾಡಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು."
>
> **– ಅಶೋಕ ಮನಗೂಳಿ, ಶಾಸಕರು, ಸಿಂದಗಿ**

# ಇಂದು ವಿದ್ಯುತ್ ವ್ಯತ್ಯಯ

**ಉದಯರಶ್ಮಿ ನ್ಯೂಸ್**

ವಿಜಯಪುರ: 110ಕೆ.ವ್ಹಿ ವಿದ್ಯುತ್ ವಿತರಣಾ ಕೇಂದ್ರದೇವರ ಹಿಪ್ಪರಗಿ– ಸಿಂದಗಿ ಕಂಡಕ್ಟರ್ ಮತ್ತು ಟವರ್ ಬದಲಾವಣೆ ಕಾಮಗಾರಿ ಕೈಗೊಂಡಿರುವುದರಿಂದ, 110 ಕೆ.ವ್ಹಿ ಸಿಂದಗಿ ವಿದ್ಯುತ್ ವಿತರಣಾ ಕೇಂದ್ರದಿಂದ ಸರಬರಾಜು ಆಗುವ 11 ಕೆವಿ ಸುಂಗಠಾಣ ಐಪಿ, 11 ಕೆವಿ ಸಿಂದಗಿ ನಗರ ಫೀಡರ್ ನಂ–1 ಹಾಗೂ 11 ಕೆವಿ ಯಂಕಚಿ ಐಪಿ ಮಾರ್ಗಗಳಲ್ಲಿ ಮಾ.17ರಂದು ಬೆಳಗ್ಗೆ 10.00 ರಿಂದ ಸಾಯಂಕಾಲ 05.00 ಘಂಟೆಯವರೆಗೆ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಸದರೀ ಮಾರ್ಗಗಳ ಮೇಲೆ ಬರುವಗ್ರಾಹಕರು ಹಾಗೂ ಸಾರ್ವಜನಿಕರು ಸಹಕರಿಸಬೇಕಾಗಿ ಹೆಸ್ಕಾಂನ ಕಾರ್ಯನಿರ್ವಾಹಕ ಅಭಿಯಂತರರು (ವಿ) ಹೆಸ್ಕಾಂ, ಇಂಡಿರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹೊನ್ನಳ್ಳಿಯಲ್ಲಿ ಜೆಜೆಎಂ ಕಾಮಗಾರಿಗೆ ಭೂಮಿಪೂಜೆ ಸಲ್ಲಿಸಿದ ಗ್ರಾಪಂ ಅಧ್ಯಕ್ಷ ಸಂಗನಗೌಡ ಅಭಿಮತ

# ಜೆಜೆಎಂ ಯೋಜನೆ ಸದುಪಯೋಗವಾಗಲಿ

**ಉದಯರಶ್ಮಿ ನ್ಯೂಸ್**

ಬ್ರಹ್ಮದೇವನಮಡು: ಗ್ರಾಮೀಣ ಪ್ರದೇಶದ ಜನರಿಗೆ ಸಮಪ9ಕ ಕುಡಿಯುವ ನೀರು ಪೂರೈಸುವ ಮಹತ್ತರ ಯೋಜನೆಯನ್ನು ಕೇಂದ್ರ ಹಾಗೂ ರಾಜ್ಯ ಸರಕಾರ ಜಾರಿಗೊಳಿಸಿದ್ದು, ಪ್ರತಿಯೊಬ್ಬರೂ ಅದರ ಸದುಪಯೋಗ ಪಡೆಯಬೇಕು ಎಂದು ಗ್ರಾಪಂ ಅಧ್ಯಕ್ಷ ಸಂಗನಗೌಡ ಬಿರಾದಾರ (ಕರವಿನಾಳ) ಹೇಳಿದರು.



ಸಿಂದಗಿ ತಾಲೂಕಿನ ಹೊನ್ನಳ್ಳಿ ಗ್ರಾಮದಲ್ಲಿ 1 ಕೋಟಿ 4 ಲಕ್ಷ ರೂ.ವೆಚ್ಚದ ಜಲ ಜೀವನ ಮಿಷನ್ ಯೋಜನೆ ಕಾಮಗಾರಿಗೆ ಶನಿವಾರ ಭೂಮಿಪೂಜೆ ಅವರು ಮಾತನಾಡಿದರು.


ಈ ಯೋಜನೆಯ ಮೂಲಕ ಗ್ರಾಮೀಣ ಭಾಗದಲ್ಲಿನ ಪ್ರತಿಯೊಂದು ಮನೆಗೂ ನೀರಿನ ಸೌಲಭ್ಯ ಕಲ್ಪಿಸಲಾಗುವುದು. 2022–23ನೇ ಸಾಲಿನ ಕೇಂದ್ರ ಹಾಗೂ ರಾಜ್ಯ ಸರಕಾರದ ಮಹತ್ವಾಕಾಂಕ್ಷೆ ಯೋಜನೆಯಾದ ಜಲ ಜೀವನ ಮಿಷನ್ ಯೋಜನೆಯಡಿ ಪ್ರತಿ ಮನೆಗೆ ನಳ ಸಂಪಕ9 ಕಲ್ಪಿಸಿ ನೀರಿನ ಸಮಸ್ಯೆ ನಿವಾರಿಸಲಾಗುವುದು ಎಂದರು.

ಈ ವೇಳೆ ನಾಯ್ಕೋಡಿ, ಯುವ ಮುಖಂಡ ಹಣಮಂತ್ರಾಯಗೌಡ ಬಿರಾದಾರ, ಬಸನಗೌಡ ಉಳ್ಳೆಸೂರ, ಡಾ.ಎನ್.ಪಿ.ನಾಯ್ಕೋಡಿ, ಹೊಬು ಚವ್ಹಾಣ, ಹಿರಿಮಾನ ಚವ್ಹಾಣ, ಸಲಿವ್ಹಾಣ. ಮೇಲಿನಮನಿ, ಪ್ರಭಾಕರ ಪತ್ತಾರ, ಕೆ.ಬಿ.ಮನಗೂಳಿ, ಸುರೇಶ ಕೆಂಭಾವಿ, ಮರೆಪ್ಪ ಚಲುವಾದಿ, ಅನೀಲ ಖಾನಾಪೂರ, ದಸ್ತಗೀರಬಾಷಾ ಇದ್ದರು.

# ಹಿರೇಬೇವನೂರ: ಬೀಳ್ಕೊಡುವ ಸಮಾರಂಭ

**ಉದಯರಶ್ಮಿ ನ್ಯೂಸ್**

ಇಂಡಿ: ಕನ್ನಡ ಭಾಷಾ ರಕ್ಷಣೆಗೆ ಕನ್ನಡ ಶಾಲೆಗಳು ಅಭಿವೃದ್ಧಿ ಪಡಿಸುವುದು ಅತೀ ಮುಖ್ಯ. ಮಕ್ಕಳ ಮನಸ್ಸು ಹೂವಿನ ಹಾಗೆ ಇದ್ದು, ಅದನ್ನು ಉತ್ತಮ ರೀತಿಯಲ್ಲಿ ಸಮಾಜಕೆ ನೀಡುವುದರಲ್ಲಿ ಕನ್ನಡ ಶಾಲೆಗಳ ಪಾತ್ರ ಬಹಳ ಮುಖ್ಯವಾಗಿದೆ ಎಂದು ಎಸ್ ಡಿ ಎಮ್ ಸಿ ಅಧ್ಯಕ್ಷ ರಾಜಶೇಖರ ಪಾತಾಳಿ ಮಾತನಾಡಿದರು.



ತಾಲೂಕಿನ ಹಿರೇಬೇವನೂರ ಗ್ರಾಮದ ಸರಕಾರಿ ಎಮ್ ಪಿ ಎಸ್ ಶಾಲೆಯ 7ನೇ ವರ್ಗದ ವಿದ್ಯಾರ್ಥಿಗಳ ಬೀಳ್ಕೊಡುವ ಹಾಗೂ "ದೀಪದಾನ" ಸಮಾರಂಭದಲ್ಲಿ ಪ್ರತಿಜ್ಞಾವಿಧಿಯನ್ನು ಬೋಧಿಸಿ ಮಾತನಾಡತ್ತಿದ್ದರು.

ಮುಖ್ಯ ಅತಿಥಿ ವೇ ದಯಾನಂದ ಹಿರೇಮಠ ಮಾತನಾಡಿದ ಅವರು, ಭವ್ಯ ಸಂಸ್ಕೃತಿಯ ಉಳಿವು ಕನ್ನಡ ಶಾಲೆಗಳಿಂದ ಮಾತ್ರ ಸಾಧ್ಯ.

ಶಿಕ್ಷಕರು ಹಾಗೂ ಶಿಕ್ಷಣ ನಮ್ಮನ್ನು ಮನುಷ್ಯರನ್ನಾಗಿ ರೂಪಿಸುತ್ತಾರೆ. ನಾವು ಕಲಿತ ಶಿಕ್ಷಣ ಕೇವಲ ಹಣಗಳಿಕೆ ಮಾತ್ರವಲ್ಲದೆ, ಅದು ಉತ್ತಮ ಬದುಕು ಬದುಕಲಿಕ್ಕೆ ಸಹಕಾರಿಯಾದಾಗ ಮಾತ್ರ ಶಿಕ್ಷಣದ ಉದ್ದೇಶ ಈಡೇರುತ್ತದೆ, ಮಾತಪಿತರನ್ನು, ಪಾಲಕರನ್ನು ಗೌರವದಿಂದ ಕಾಣುವುದರ ಮೂಲಕ ನಾವು ಅವರ ಸೇವೆಯನ್ನು ಮಾಡಬೇಕು ಎಂದು ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು.

ಸಮಾರಂಭದ ಮುಖ್ಯ ಅತಿಥಿ ದಯಾನಂದ ಹಿರೇಮಠ, ಸೋಮಶೇಖರ್ ಪಾತಾಳಿ, ಆರ್ ಡಿ ಪಾಟೀಲ,ಬಿ ಎಸ್ ಭಾಸಗಿ, ಶರಣಪ್ಪ ನಾವಿ" ಭಾಗವಹಿಸಿದ್ದರು.

ಮುಖ್ಯ ಗುರು ಆರ್ ಸಿ ರಾಠೋಡ್ ಸಹಶಿಕ್ಷಕರು ಹಾಗೂ ಮಕ್ಕಳು ಉಪಸ್ಥಿತರಿದ್ದರು. ಸ್ವಾಗತ ಎನ್ ಎಲ್ ಹಚಡದ, ನಿರೂಪಣೆ ಶಿವುಕುಮಾರ ಕೌಲಗಿ, ಯು ಬಿ ಬಜಂತ್ರಿ ವಂದಿಸಿದರು.

# ಕೆರೆಗೆ ನೀರು: 144 ಕಲಂ ಜಾರಿ

**ಉದಯರಶ್ಮಿ ನ್ಯೂಸ್**

ವಿಜಯಪುರ: ಮುಳವಾಡ ಏತನೀರಾವರಿ ಯೋಜನೆಯ ಕಾಲುವೆ ಮೂಲಕ ನೀರನ್ನು ಹರಿಸಿ, ತಿಡಗುಂದಿ ಶಾಖಾ ಕಾಲುವೆಯ ಅರಕೇರಿ ಲಿಫ್ಟಿಂದ ವಿಜಯಪುರ ಶಾಖಾ ಕಾಲುವೆಯ ಮೂಲಕ ಭೂತನಾಳ ಕೆರೆಗೆ ನೀರನ್ನು ತುಂಬಿಸಬೇಕಾಗಿದ್ದು, ನೀರು ಪೋಲಾಗದಂತೆ ಮತ್ತು ನಿಗದಿತ ಅಂತರವನ್ನು ತಲುಪುವುದಕ್ಕಾಗಿ ಕಾಲುವೆಯ 100 ಅಡಿ ಸುತ್ತಮುತ್ತ ಮಾ.23ರವರೆಗೆ 144 ಸೆಕ್ಷನ್ ಜಾರಿ ಮಾಡಿ ಜಿಲ್ಲಾಧಿಕಾರಿ ಟಿ.ಭೂಬಾಲನ್ ಆದೇಶ ಹೊರಡಿಸಿದ್ದಾರೆ.

# ಹುಣಸೆಹಣ್ಣಿನ ಬಹಿರಂಗ ಹರಾಜು

**ಉದಯರಶ್ಮಿ ನ್ಯೂಸ್**

ವಿಜಯಪುರ: ನಗರರ ಕೇಂದ್ರ ಕಾರಾಗೃಹದ ತೋಟದ ವಿಭಾಗದಲ್ಲಿರುವ ಹುಣಸೆಹಣ್ಣಿನ ಬಹಿರಂಗ ಹರಾಜು ಪ್ರಕ್ರಿಯೆ ಮಾ.27ರಂದು ಬೆಳಗ್ಗೆ 11 ಗಂಟೆಗೆ ನಡೆಯಲಿದೆ. ಆಸಕ್ತರು ಹರಾಜು ಪ್ರಕ್ರಿಯೆಯಲ್ಲಿ ಭಾಗವಹಿಸಬಹುದು. ಹೆಚ್ಚಿನ ಮಾಹಿತಿಗಾಗಿ ಕೇಂದ್ರ ಕಾರಾಗೃಹದ ಅಧೀಕ್ಷಕ ಕಾರ್ಯಲಯ (9480806490)ನ್ನು ಸಂಪರ್ಕಿಸಬಹುದು ಎಂದು ಕೇಂದ್ರ ಕಾರಾಗೃಹದ ಅದೀಕ್ಷಕರಾದ ಡಾ. ಐ.ಜೆ. ಮ್ಯಾಗೇರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರಾಧಿಕಾರ ಅಧ್ಯಕ್ಷರಾಗಿ ಡಾ.ಚನ್ನಪ್ಪ ಕಟ್ಟಿ

**ಉದಯರಶ್ಮಿ ನ್ಯೂಸ್**



ಸಿಂದಗಿ: ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವ್ಯಾಪ್ತಿಯ ಕುವೆಂಪು ಭಾಷಾ ಭಾರತಿ ಪ್ರಾಧಿಕಾರ ಅಧ್ಯಕ್ಷರಾಗಿ ಸಿಂದಗಿಯ ಹಿರಿಯ ಸಾಹಿತಿ, ಕಥೆಗಾರ, ನಿವೃತ್ತ ಪ್ರಾಚಾರ್ಯ ಡಾ. ಚನ್ನಪ್ಪ ಕಟ್ಟಿ ಅವರನ್ನು ನೇಮಕ ಮಾಡಿ ರಾಜ್ಯ ಸರಕಾರವು ಆದೇಶ ಹೊರಡಿಸಿದೆ.

ಅಭಿನಂದನೆ: ಸಾರಂಗಮಠದ ಡಾ.ಪ್ರಭು ಸಾರಂಗದೇವ ಶಿವಾಚಾರ್ಯರು, ಯಂಕಂಚಿ ಅಭಿನವ ರುದ್ರಮುನಿ ಶಿವಾಚಾರ್ಯರು, ಕನ್ನೊಳ್ಳಿಯ ಸಿದ್ದಲಿಂಗ ಶಿವಾಚಾರ್ಯರು, ಶಾಸಕ ಅಶೋಕ ಮನಗೂಳಿ, ಹಿರಿಯ ಜಾನಪದ ವಿದ್ವಾಂಸ ಡಾ. ಎಂ.ಎಂ.ಪಡಶೆಟ್ಟಿ, ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಉಪಾಧ್ಯಕ್ಷ ಇಂದುಶೇಖರ ಮಣೂರ, ತಾಲೂಕಾಧ್ಯಕ್ಷ ಆನಂದ ಶಾಬಾದಿ, ಪ್ರವೀಣ ಹಾಲಹಳ್ಳಿ, ಎಸ್. ಎಂ. ಪಾಟೀಲ ಗಣಿಹಾರ ಸೇರಿದಂತೆ ತಾಲೂಕಿನ ಜನತೆ ಅಭಿನಂದನೆ ಸಲ್ಲಿಸಿದ್ದಾರೆ.

## ಸಿಂದಗಿಯಲ್ಲಿ ಬಣಜಿಗ ಸಂಘದ ಸಮುದಾಯ ಭವನಕ್ಕೆ ರೂ.75ಲಕ್ಷ ಅನುದಾನದ ಭರವಸೆ

# ಬಣಜಿಗ ಭವನಕ್ಕೆ ಶಾಸಕ ಮನಗೂಳಿ ರೂ.5ಲಕ್ಷ ಸಹಾಯ

**ಉದಯರಶ್ಮಿ ನ್ಯೂಸ್**

ಸಿಂದಗಿ: ಪ್ರತಿಯೊಂದು ಸಮಾಜ ಆರ್ಥಿಕ, ರಾಜಕೀಯ ಮತ್ತು ಸಾಮಾಜಿಕವಾಗಿ ಬೆಳೆಯಬೇಕು, ಅಂತಹ ಸಮಾಜಗಳಲ್ಲಿ ಬಣಜಿಗ ಸಮಾಜ ಸಿಂದಗಿ ತಾಲೂಕಿನಲ್ಲಿ ಐತಿಹಾಸಿಕವುಳ್ಳ ಸಮಾಜ ಎಂದು ಶಾಸಕ ಅಶೋಕ ಮನಗೂಳಿ ಹೇಳಿದರು.




ಪಟ್ಟಣದ ಕಾಳಿಕಾ ನಗರದಲ್ಲಿ ಶುಕ್ರವಾರ ಸಾಯಂಕಾಲ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವಿಜಯಪುರ, ಕೆಆರ್‌ಐಡಿಎಲ್ ಅನುಷ್ಠಾನದಲ್ಲಿ 2023–24ನೆಯ ಸಾಲಿನ ಮುಖ್ಯಮಂತ್ರಿಗಳ ವಿಶೇಷ ಅನುದಾನದಡಿಯಲ್ಲಿ ಹಮ್ಮಿಕೊಂಡ ಬಣಜಿಗ ಕ್ಷೇಮಾಭಿವೃದ್ಧಿ ಸಂಘದ ಸಮುದಾಯ ಭವನ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಈಗಾಗಲೇ ಸರಕಾರದಿಂದ ಸಮುದಾಯ ಭವನಕ್ಕೆ ಸರಕಾರದಿಂದ 25ಲಕ್ಷ ರೂ. ಅನುದಾನ ಮಂಜೂರು ಮಾಡಿಸಿರುವೆ. ಮುಂಬರುವ ದಿನಮಾನಗಳಲ್ಲಿ ಒಂದು ಸುಸಜ್ಜಿತ ಕಟ್ಟಡ ನಿರ್ಮಾಣ ಮಾಡುವ ನಿಟ್ಟಿನಲ್ಲಿ ಮತ್ತೆ ಸರಕಾರದಿಂದ 50ಲಕ್ಷ ರೂ. ಅನುದಾನ ಮಂಜೂರು ಮಾಡಿಸಿಕೊಡುತ್ತೇನೆ. ಈ ಹಿಂದೆ ನಮ್ಮ ತಂದೆ ಮಾಜಿ ಸಚಿವ ದಿ.ಎಂ.ಸಿ.ಮನಗೂಳಿ ಅವರು ಬಣಜಿಗ ಸಮಾಜ ಕಾರ್ಯಕ್ರಮದಲ್ಲಿ ಭಾಗಿಯಾದಾಗ 5ಲಕ್ಷ ರೂ. ಸಮಾಜದ ಏಳಿಗೆಗೆ ನೀಡುವೆ ಎಂದು ಹೇಳಿದ್ದರು. ಆ ಹಣವನ್ನು ವೈಯಕ್ತಿಕವಾಗಿ ಆ 5ಲಕ್ಷ ರೂ. ಅನುದಾನವನ್ನು ನೀಡುತ್ತೇನೆ ಎಂದು ಹೇಳಿದರು.

ಈ ವೇಳೆ ಸಮಾಜದ ಗೌರವಾಧ್ಯಕ್ಷ ಡಾ.ಎಂ.ಎಂ.ಪಡಶೆಟ್ಟಿ ಮಾತನಾಡಿದರು.

ಕಾರ್ಯಕ್ರಮದ ಸಾನಿಧ್ಯ ವಹಿಸಿದ್ದ ಸಾರಂಗಮಠದ ಡಾ.ಪ್ರಭು ಸಾರಂಗದೇವ ಶಿವಾಚಾರ್ಯರು ಆಶೀರ್ವಚನ ನೀಡಿದರು.

ಇದೇ ಸಂದರ್ಭದಲ್ಲಿ ಭೂದಾನಿ ಮುರಗೆಪ್ಪ ಕಿಣಗಿ, ಸಮಾಜದ ತಾಲೂಕಾಧ್ಯಕ್ಷ ಮುತ್ತು ಮುಂಡೇವಾಡಗಿ, ಉಮೇಶ ಜೋಗೂರ, ಮಹಾಂತೇಶ ಪಟ್ಟಣಶೆಟ್ಟಿ, ಸುರೇಶ ಜೋಗೂರ, ಪ್ರಕಾಶ ಗುಣಾರಿ, ರವಿ ಗೋಲಾ, ಮುತ್ತು ಪಟ್ಟಣಶೆಟ್ಟಿ, ಶ್ರೀಧರ ಬಮ್ಮಣ್ಣಿ, ಪ್ರಕಾಶ ದಸ್ಮಾ, ದಯಾನಂದ ಇವಣಿ, ಸಿದ್ದು ಅಂಗಡಿ, ಅನಿಲ ಪಟ್ಟಣಶೆಟ್ಟಿ, ಮಹಾನಂದ ಬಮ್ಮಣ್ಣಿ. ಪ್ರತಿಭಾ ಚಳ್ಳಗಿ, ಸೇರಿದಂತೆ ಸಮಾಜ ಬಾಂಧವರು ಇದ್ದರು.

# ಶಾಲಾ ಸೌಲಭ್ಯಗಳಿಗಾಗಿ ವಿದ್ಯಾರ್ಥಿಗಳು–ಪಾಲಕರ ಆಗ್ರಹ

**ಉದಯರಶ್ಮಿ ನ್ಯೂಸ್**

ದೇವರಹಿಪ್ಪರಗಿ: ಪ್ರೌಢಶಾಲೆ ಕುಡಿಯುವ ನೀರು, ಶೌಚಾಲಯ, ಬಿಸಿಯೂಟ, ಕಂಪ್ಯೂಟ–ರ್ ಶಿಕ್ಷಣ ಸೇರಿದಂತೆ ಎಲ್ಲ ಮೂಲಭೂತ ಸೌಲಭ್ಯಗಳನ್ನು ದೊರಕಿಸಿಕೊಡುವಂತೆ ವಿದ್ಯಾರ್ಥಿಗಳು ಪಾಲಕರ ಜೊತೆಗೂಡಿ ಆಗ್ರಹಿಸಿದರು.



ತಾಲ್ಲೂಕಿನ ಗಂಗನಳ್ಳಿ ಸರ್ಕಾರಿ ಪ್ರೌಢಶಾಲೆ ಹಲವು ಸೌಲಭ್ಯಗಳ ಕೊರತೆಯಿಂದ ಬಳಲುತ್ತಿದ್ದು, ಕೂಡಲೇ ಶಾಲೆಗೆ ಶೌಚಾಲಯ, ಕ್ರೀಡಾಮೈದಾನ, ವಾರದಲ್ಲಿ ವಿತರಿಸುವ ಶೇಂಗಾಚಿಕ್ಕಿ, ಮೊಟ್ಟೆ ಸೇರಿದಂತೆ ಬಿಸಿಯೂಟ ವ್ಯವಸ್ಥೆಗಳನ್ನು ಸುಧಾರಿಸುವದು ಹಾಗೂ ಮುಖ್ಯವಾಗಿ ಮುಖ್ಯಗುರು ಅಡುಗೆ ಸಿಬ್ಬಂದಿಗೆ ಸಹಕಾರ ನೀಡುವಂತೆ ವಿದ್ಯಾರ್ಥಿಗಳೊಂದಿಗೆ ಸೇರಿ ಪಾಲಕರು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಚಿದಾನಂದ ಕನ್ನೊಳ್ಳಿ ಮಾತನಾಡಿ, ನಮ್ಮೂ–ರಿನ ಪ್ರೌಢಶಾಲೆಗೆ ವಿದ್ಯುತ್ ವ್ಯವಸ್ಥೆ ಹಾಗೂ ಕಂಪ್ಯೂಟರ್ ಶಿಕ್ಷಕರು ಇಲ್ಲದ ಕಾರಣ ಹಲವು ದಿನಗಳಿಂದ ಕಂಪ್ಯೂಟರ್ ಇದ್ದು ಇಲ್ಲದಂತಾಗಿವೆ. ಇನ್ನೂ ಮಧ್ಯಾಹ್ನದ ಬಿಸಿಯೂಟಕ್ಕೆ ಅಡುಗೆ ಸಿಬ್ಬಂದಿಗೆ ಕೇವಲ 2 ಟೊಮೇಟೊ ನೀಡುತ್ತಾರೆ ಇದರಲ್ಲಿ ಅವರು ಅಡಿಗೆ ಮಾಡುವುದಾದರೂ ಹೇಗೆ? ಎಂದು ತಮ್ಮ ಅಭಿಪ್ರಾಯ ವ್ಯಕ್ತಪಡಿಸುತ್ತಾರೆ.

ಶಾಲೆಯ ಮುಖ್ಯಗುರು ಎಚ್. ಎಮ್. ಸಜ್ಜನ ಈ ಬಗ್ಗೆ ಮಾತನಾಡಿ, ನಮ್ಮ ಶಾಲೆಯಲ್ಲಿ ಮೊಟ್ಟೆ ಸೇ–ರಿದಂತೆ ಎಲ್ಲವನ್ನು ಮಕ್ಕಳಿಗೆ ನೀಡಲಾಗುತ್ತಿದೆ. ಆದರೆ ಗ್ರಾಮದ ಕನ್ನೊಳ್ಳಿ ಅನ್ನುವವರು ಎಸ್‌ಡಿ–ಎಮ್‌ಸಿ ಅಧ್ಯಕ್ಷರಾಗ ಬಯಸಿದ್ದು ಅವರ ಮಕ್ಕಳು ಯಾವುದೇ ತರಗತಿಯಲ್ಲಿ ಇರದ ಕಾರಣ ಅವರನ್ನು ನಿರಾಕರಿಸಲಾಯಿತು. ಇದೇ ವಿಷಯವನ್ನು ಇಟ್ಟುಕೊಂಡು ಇಂದು ಮಕ್ಕಳೊಂದಿಗೆ ಸೇರಿ ವಿನಾಕಾರಣ ನನ್ನ ಮೇಲೆ ಗೂಬೆ ಕೂರಿಸುತ್ತಿದ್ದಾರೆ. ಶಾಲೆಯಲ್ಲಿ ಮೂವರು ಖಾಯಂ ಹಾಗೂ ನಾಲ್ವರು ಅತಿಥಿ ಶಿಕ್ಷಕರುಗಳಿದ್ದಾರೆ. ಇನ್ನು ಕಂಪ್ಯೂಟರ್ ವಿಷಯಕ್ಕೆ ಸಂಬಂಧಿಸಿದಂತೆ ಸರ್ಕಾರ 5 ಕಂಪ್ಯೂಟರ್ ಹಾಗೂ ಒಂದು ಪ್ರೊಜೆಕ್ಟರ್ ನೀಡಿದೆ. ಆದರೆ ಅದರ ಟೇಬಲ್‌ಗಳು ಹಾಗೂ ಶಿಕ್ಷಕರನ್ನು ನೀಡಿಲ್ಲ. ವಿದ್ಯುತ್ ವ್ಯವಸ್ಥೆ ಇದ್ದರೂ ನಿರಂತರ ವಿದ್ಯುತ್ ವ್ಯವಸ್ಥೆಯಿಲ್ಲ. ಹೀಗಾಗಿ ಅವುಗಳನ್ನು ಹಾಗೇ ಇಡಲಾಗಿದೆ. ಇದರಲ್ಲಿ ನನ್ನ ತಪ್ಪೇನು ಇಲ್ಲ ಎಂದು ವಿವರಣೆ ನೀಡುತ್ತಾರೆ.

ನಮ್ಮ ಶಾಲೆಗೆ ಎಲ್ಲ ಸೌಲಭ್ಯಗಳನ್ನು ದೊರಕಿಸಿ ಮಕ್ಕಳ ವಿದ್ಯಾಭ್ಯಾಸಕ್ಕೆ ಸಹಕಾರ ನೀಡಿ ಎಂದು ವಿದ್ಯಾರ್ಥಿನೀಯರಾದ ರಾಜೇಶ್ವರಿ ಈಶ್ವರಪ್ಪಗೋಳ, ಭಾಗ್ಯಶ್ರೀ ಹೊಸಮನಿ, ಕಾಂಚನ ಹಡಪದ, ರಾಜೇಶ್ವರಿ ಬೇನೂರ, ಶರಣಮ್ಮ ಕುಂಬಾರ ಸೇರಿದಂತೆ ವಿದ್ಯಾರ್ಥಿಗಳ ಪಾಲಕರು ಆಗ್ರಹಿಸುತ್ತಾರೆ.

### ರಾಜ್ಯ ಸಹಕಾರ ಮಹಾಮಂಡಳ ನಿರ್ದೇಶಕ ಈರಣ್ಣ ಪಟ್ಟಣಶೆಟ್ಟಿ ಸಲಹೆ

# ಜನಕಲ್ಯಾಣ ಸಮುದಾಯ ಭವನ ಸದುಪಯೋಗವಾಗಲಿ

**ಉದಯರಶ್ಮಿ ನ್ಯೂಸ್**




ಬಸವನಬಾಗೇವಾಡಿ: ಭಗವಂತನಲ್ಲಿ ಭಕ್ತಿಯಿದ್ದರೆ ಅನೇಕ ಸಾಮಾಜಿಕ ಕಾರ್ಯಗಳು ನಡೆಯುತ್ತವೆ. ಅರಳಿಚಂಡಿ ಗ್ರಾಮದ ಜಗನ್ಮಾತೆ ಆದಿಶಕ್ತಿದೇವಿ ಹಿರೇಮಠದ ಶಕ್ತಿ ದೊಡ್ಡದು. ದೇವಿ ಕೃಪೆ ಪಡೆದ ಅನೇಕ ಸದ್ಭಕ್ತರ ಸಹಾಯ–ಸಹಕಾರದಿಂದ ಭವ್ಯವಾದ ಜನಕಲ್ಯಾಣ ಸಮುದಾಯ ಭವನ ನಿರ್ಮಾಣವಾಗಿರುವುದು ಶ್ಲಾಘನೀಯ ಎಂದು ರಾಜ್ಯ ಸಹಕಾರ ಮಹಾಮಂಡಳ ನಿರ್ದೇಶಕ ಈರಣ್ಣ ಪಟ್ಟಣಶೆಟ್ಟಿ ಹೇಳಿದರು.

ತಾಲೂಕಿನ ಅರಳಿಚಂಡಿ ಗ್ರಾಮದ ಜಗನ್ಮಾತೆ ಆದಿಶಕ್ತಿದೇವಿ ಹಿರೇಮಠದಲ್ಲಿ ನಿರ್ಮಾಣವಾದ ಜನಕಲ್ಯಾಣ ಸಮುದಾಯ ಭವನ ಲೋಕಾರ್ಪಣೆಯಂಗವಾಗಿ ಶನಿವಾರ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಎಲ್ಲ ಸಮಾಜ ಬಾಂಧವರನ್ನು ಸಮಾನವಾಗಿ ಕಾಣುವ ಗ್ರಾಮ ಇದಾಗಿದೆ. ಈ ಗ್ರಾಮಸ್ಥರ ಒಗ್ಗಟ್ಟಿನಿಂದ ಗ್ರಾಮಕ್ಕೆ ಅನೇಕ ಕೆಲಸಗಳು ಆಗಿವೆ. ಅರಳಿಚಂಡಿ ಕೆರೆ ತುಂಬಿದರಿಂದ ಈ ಭಾಗದಲ್ಲಿ ನೀರಿನ ಭವಣೆ ಇಲ್ಲದಂತಾಗಿದೆ. ಜನರಲ್ಲಿ ಒಗ್ಗಟ್ಟು ಇದ್ದಾಗ ಅದಕ್ಕೆ ಬರುವ ಮೆರಗು ಬೇರೆಯಾಗಿರುತ್ತದೆ ಎಂದ ಅವರು, ಅರಳಿಚಂಡಿ ಗ್ರಾಮಕ್ಕೆ ಬರಲು ಮೊದಲು ಸರಿಯಾದ ರಸ್ತೆಗಳು ಇರಲಿಲ್ಲ. ಮೊದಲ ಬಾರಿಗೆ ಈ ಗ್ರಾಮಕ್ಕೆ ಸಚಿವ ಶಿವಾನಂದ ಪಾಟೀಲರನ್ನು ಕರೆದುಕೊಂಡು ಬಂದಾಗ ರಸ್ತೆಗಳು ಇರದೇ ಇರುವದನ್ನು ಗಮನಿಸಿದ ಅವರು ಮುತುವರ್ಜಿ ವಹಿಸಿ ಗ್ರಾಮಕ್ಕೆ ಬರಲು ನಾಲ್ಕು ಕಡೆ ರಸ್ತೆಗಳನ್ನು ನಿರ್ಮಾಣ ಮಾಡಿಕೊಟ್ಟಿದ್ದಾರೆ. ಇದರಿಂದಾಗಿ ಗ್ರಾಮಸ್ಥರಿಗೆ ತುಂಬಾ ಅನುಕೂಲವಾಗಿದೆ ಎಂದರು.

ಜೆಡಿಎಸ್ ಮುಖಂಡ ಅಪ್ಪುಗೌಡ ಪಾಟೀಲ ಮಾತನಾಡಿ, ಎಲ್ಲ ಜನರಿಗೆ ಸದುಪಯೋಗವಾಗುವ ಸದುದ್ದೇಶದಿಂದ ಈ ಜನಕಲ್ಯಾಣ ಸಮುದಾಯ ಭವನ ನಿರ್ಮಾಣವಾಗಿರುವದು ಸಂತಸದಾಯಕ ಸಂಗತಿ. ಈ ಸಮುದಾಯ ಭವನದಲ್ಲಿ ಒಳ್ಳೆಯ ಕಾರ್ಯಗಳು ನೆರವೇರಿ ಎಲ್ಲ–ರಿಗೂ ಅನುಕೂಲವಾಗುವುದರಲ್ಲಿ ಸಂದೇಹವಿಲ್ಲ. ಆಧ್ಯಾತ್ಮಿಕ ಕಾರ್ಯಕ್ರಮಗಳಲ್ಲಿ ನಾವುಗಳು ಭಾಗವಹಿಸಿದರೆ ಅನೇಕ ಶ್ರೀಗಳ ಆಶೀರ್ವಾದ ಸಿಗುವ ಜೊತೆಗೆ ಜೀವನದ ಸನ್ಮಾರ್ಗಕ್ಕೆ ಹಿತನುಡಿಗಳು ನಮಗೆ ಸಿಗುತ್ತವೆ. ಇಂತಹ ಕಾರ್ಯಕ್ರಮಗಳಲ್ಲಿ ಎಲ್ಲರೂ ಭಾಗವಹಿಸುವಂತಾಗಬೇಕೆಂದರು.

ಸಾನಿಧ್ಯ ವಹಿಸಿದ್ದ ಇಂಗಳೇಶ್ವರದ ಚನ್ನಬಸವ ಸ್ವಾಮೀಜಿ ಮಾತನಾಡಿ, ಜಗತ್ತಿನಲ್ಲಿ ಇನ್ನೂ ದಾನಿಗಳು ಇರುವದರಿಂದಾಗಿ ಮಠ–ಮಾನ್ಯಗಳಲ್ಲಿ ಅನೇಕ ಮಹಾತ್ಕಾರ್ಯಗಳು ಆಗುತ್ತಿವೆ. ಇಲ್ಲಿನ ಹಿರೇಮಠದ ಸಮುದಾಯ ಭವನಕ್ಕೆ ನಾನಾ ದಾನಿಗಳು ಕೊಟ್ಟ ಸಹಕಾರದಿಂದ ಇದು ನಿರ್ಮಾಣವಾಗಿದೆ. ಜನರು ಇದರ ಸದುಪಯೋಗ ಪಡೆದುಕೊಂಡು ಮಂಗಲ ಕಾರ್ಯಗಳು ಸದಾ ನಡೆಯುವಂತೆ ಆಗಲಿ ಎಂದರು.

ಯುವಮುಖಂಡ ಸಂಗಮೇಶ ಓಲೇಕಾರ, ನಿವೃತ್ತ ಶಿಕ್ಷಕ ಎಸ್.ಎಸ್.ಗುಬ್ಬಾ ಮಾತನಾಡಿದರು.

ಸಾನಿಧ್ಯವನ್ನು ಶಿವಪ್ರಕಾಶ ಶಿವಾಚಾರ್ಯ ಸ್ವಾಮೀಜಿ, ಬೃಂಗೀಶ್ವರ ಶಿವಾಚಾರ್ಯ ಸ್ವಾಮೀಜಿ, ಮಹಾದೇವಯ್ಯ ಹಿರೇಮಠ ವಹಿಸಿದ್ದರು. ಕಾರ್ಯಕ್ರಮದಲ್ಲಿ ಡಿಸಿಸಿ ಬ್ಯಾಂಕಿನ ನಿರ್ದೇಶಕ ಚಂದ್ರಶೇಖರಗೌಡ ಪಾಟೀಲ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸುರೇಶ ಹಾರಿವಾಳ, ಮುಖಂಡರಾದ ಗುರಪ್ಪ ದೇವೂರ, ಶರಣಬಸಪ್ಪ ಬ್ಯಾಕೋಡ, ರಮೇಶ ಕೋರಿ, ಮಹಾಂತೇಶ ಬ್ಯಾಕೋಡ, ಬಂದೇನವಾಜ ನಂದವಾಡಗಿ, ಗೋಪಾಲ ಕನಸೆ, ಪ್ರಕಾಶ ದೇಸಾಯಿ, ನಿಂಗಪ್ಪ ಬಮ್ಮನಹಳ್ಳಿ, ಈರಣ್ಣ ಬೆಕಿನಾಳ, ಶಿವಾನಂದ ಹಿರೇಮಠ, ರಾಜೇಂದ್ರ ಬ್ಯಾಕೋಡ,ಸಾತಪ್ಪ ಕಿಣಗಿ, ಶರದ ಬ್ಯಾಕೋಡ, ಲಕ್ಷ್ಮೀ ಶಾಖಾಪೂರ ಇತರರು ಇದ್ದರು.

ಇದೇ ಸಂದರ್ಭದಲ್ಲಿ ಸಮುದಾಯ ಭವನ ನಿರ್ಮಾಣ ಧನ ಸಹಾಯ ನೀಡಿದ ದಾನಿಗಳನ್ನು ಶ್ರೀಮಠದಿಂದ ಸನ್ಮಾನಿಸಲಾಯಿತು. ಬಿ.ಎಂ.ಮುಕಾರ್ತಿಹಾಳ ಸ್ವಾಗತಿಸಿದರು. ಎಸ್.ಎಸ್.ಕತ್ತಿ ನಿರೂಪಿಸಿದರು. ಎಚ್.ಎಸ್.ಸೊನ್ನದ ವಂದಿಸಿದರು.

# ಗ್ಯಾರಂಟಿ ಯೋಜನೆಗಳ ಸಲಹಾ ಸಮಿತಿ ಪದಾಧಿಕಾರಿಗಳ ಪದಗ್ರಹಣ

**ಉದಯರಶ್ಮಿ ನ್ಯೂಸ್**



ಮುದ್ದೇಬಿಹಾಳ: ಗ್ಯಾರಂಟಿ ಯೋಜನೆಗಳನ್ನು ಶೀಘ್ರವಾಗಿ ಜಾ–ರಿಗೊಳಿಸುವ ಮೂಲಕ ಕಾಂಗ್ರೆಸ್ ಸರ್ಕಾರ ನುಡಿದಂತೆ ನಡೆದಿದೆ ಎಂದು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗುರು ತಾರನಾಳ ಹೇಳಿದರು.

ಪಟ್ಟಣದ ತಾಲೂಕು ಪಂಚಾಯತ ಸಭಾ ಭವನದಲ್ಲಿ ಗ್ಯಾರಂಟಿ ಯೋಜನೆಗಳ ಸಲಹಾ ಸಮಿತಿಯ ನೂತನ ಪದಾಧಿಕಾ–ರಿಗಳ ಪದಗ್ರಹಣ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಯೋಜನೆಗಳ ಪರಿಣಾಮಕಾರಿ ಅನುಷ್ಠಾನ ಹಾಗೂ ಮೇಲ್ವಿಚಾರಣೆಗಾಗಿ ಅನುಷ್ಠಾನ ಸಮಿತಿ ರಚಿಸಿ ಎಲ್ಲ ಫಲಾನುಭವಿಗಳಿಗೆ ಯೋಜನೆಗಳು ತಲುಪುವಂತೆ ಕ್ರಮ ಕೈಗೊಂಡು ಕಾಂಗ್ರೆಸ್ ಪಕ್ಷ ಜನಸಾಮಾನ್ಯರ ಪಕ್ಷ ಎಂದು ಮತ್ತೊಮ್ಮೆ ಸಾಬೀತು ಮಾಡಿದೆ. ಇನ್ನು ಮುಂದೆ ಯೋಜನೆಗಳ ಫಲಾನುಭವಿಗಳಿಗೆ ಸಮಸ್ಯೆಯಾದಲ್ಲಿ ಕಚೇರಿಗೆ ತಿರುಗಾಡುವ ಅವಶ್ಯಕತೆ ಇಲ್ಲ. ಸಮಿತಿಯ ಪದಾಧಿಕಾರಿಗಳನ್ನು ಸಂಪರ್ಕಿಸಿ ತಮ್ಮ ಸಮಸ್ಯೆ ತಿಳಿಸಿ ಪರಿಹಾರ ಕಂಡುಕೊಳ್ಳಬಹುದು ಎಂದರು.

ಸಮಿತಿಯ ಅಧ್ಯಕ್ಷರಾಗಿ ಅಧಿಕಾರ ವಹಿಸಿದ ಶಿವಶಂಕರಗೌಡ ಹಿರೇಗೌಡರ ಮಾತನಾಡಿ, ಏಳು ತಿಂಗಳೊಳಗೆ ಐದು ಗ್ಯಾರಂಟಿ ಯೋಜನೆಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಅನುಷ್ಠಾನಗೊಳಿಸಿ ದೇಶದಲ್ಲಿಯೇ ಕರ್ನಾಟಕವನ್ನು ಮಾದರಿಯನ್ನಾಗಿ ಮಾಡಿದ್ದಾರೆ. ಬರೀ ಯೋಜನೆಗಳನ್ನು ಜಾರಿಗೊಳಿಸುವದು ಮಾತ್ರವಲ್ಲದೇ ಅವುಗಳ ಸದ್ಬಳಕೆಗಾಗಿ ಸಮಿತಿಯನ್ನು ರಚಿಸಿ ಯಾವ ಫಲಾನುಭವಿಯೂ ವಂಚಿತನಾಗದಂತೆ ಕ್ರಮ ಕೈಗೊಳ್ಳುವ ಮೂಲಕ ಜನಪರ ಆಡಳಿತದಲ್ಲಿ ಹೊಸ ಹೆಜ್ಜೆಯನ್ನಿರಿಸಿದ್ದಾರೆ ಎಂದರು.

ಈ ವೇಳೆ ಸಮಿತಿಯ ಜಿಲ್ಲಾ ಉಪಾಧ್ಯಕ್ಷ ಸದ್ದಾಂ ಕುಂಟೋಜಿ, ನಾಲತವಾಡ ಪಟ್ಟಣದ ಪಂಚಾಯತನ ಸದಸ್ಯ ಪೃಥ್ವಿರಾಜ ನಾಡಗೌಡ, ಪ.ಜಾ ಘಟಕದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಿ.ಜಿ.ವಿಜಯಕರ, ಯುವ ಕಾಂಗ್ರೆಸ್ ಅಧ್ಯಕ್ಷ ರಫೀಕ ಶಿರೋಳ, ಪುರಸಭೆ ಸದಸ್ಯರುಗಳಾದ ಮಹೆಬೂಬ ಗೊಳಸಂಗಿ, ರಿಯಾಜ ಢವಳಗಿ, ಯಲ್ಲಪ್ಪ ನಾಯಕಮಕ್ಕಳ, ಮಾಜಿ ಸದಸ್ಯ ಗೋಪಿ ಮಡಿವಾಳರ, ತಿಪ್ಪಣ್ಣ ದೊಡಮನಿ, ಸಿಕಂದರ ಜಾನ್ವೇಕರ ಸೇರಿದಂತೆ ಮತ್ತಿತರರು ಇದ್ದರು.

ಉಪಾಧ್ಯಕ್ಷರಾಗಿ ಲಕ್ಷ್ಮಣ ಚವ್ಹಾಣ, ಸದಸ್ಯರುಗಳಾಗಿ ಹುಸೇನಭಾಷಾ ಸಾಲಿಮನಿ, ವಾಯ್.ಎಚ್.ವಿಜಯಕರ, ರಾಮಣ್ಣ ರಾಜನಾಳ, ಸಂಗಣ್ಣ ಚಲವಾದಿ, ಸರಸ್ವತಿ ಪೀರಾಪೂರ, ಸುಜಾತಾ ಶಿಂಧೆ, ಗುರುರಾಜ ಶಾಂತಗೌಡ ಬಿರಾದಾರ, ಹಣಮಂತ ಕುರಿ, ಬುಡ್ಡೆಸಾಬ ಚಪ್ಪರಬಂಧ, ಬಸವರಾಜ ಚಿನಿವಾರ, ಸಂಗಣ್ಣ ಮೇಲಿಮನಿ, ರಾಜು ನಾಯಕ, ಬಸವರಾಜ ತಾಳಿಕೋಟಿ ಇವರುಗಳು ಅಧಿಕಾರ ವಹಿಸಿಕೊಂಡರು.

# ನೂತನ ಪದಾಧಿಕಾರಿಗಳಿಗೆ ಸನ್ಮಾನ

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ಪಟ್ಟಣದ ಪ್ರವಾಸಿ ಮಂದಿರದಲ್ಲಿ ಬಿಜೆಪಿಯ ಎಸ್.ಸಿ ಮೋರ್ಚಾದ ತಾಲೂಕ ಪ್ರಧಾನ ಕಾರ್ಯದರ್ಶಿಯಾಗಿ ಆಯ್ಕೆಯಾದ ಮಲ್ಲಿಕಾರ್ಜುನ್ ತಂಗಡಗಿ, ಹಾಗೂ ರೈತ ಮೋರ್ಚಾದ ತಾಲೂಕು ಅಧ್ಯಕ್ಷರಾಗಿ ಆಯ್ಕೆಯಾದ ಎಸ್.ಎಸ್.ಶಿವಣಗಿ ಇವರುಗಳನ್ನು ವಿವಿಧ ದಲಿತಪರ ಸಂಘಟನೆಗಳ ಮುಖಂಡರು ಸನ್ಮಾನಿಸಿ ಗೌರವಿಸಿದರು.

ಈ ವೇಳೆ ಮುಖಂಡರಾದ ಹರೀಶ್ ನಾಟೀಕಾರ, ಪರಶುರಾಮ ನಾಲತವಾಡ, ಪರಶುರಾಮ ಮುರಾಳ, ಬಸವರಾಜ ಸಿದ್ದಾಪೂರ, ಮಹಾಂತೇಶ ಕಂದಗನೂರ, ಶರಣು ಸರೂರ, ರಾಹುಲ ರಮೇಶ ಕಂದಗನೂರ, ಭೀಮಣ್ಣ ನಾಯಕಮಕ್ಕಳ, ಗುಂಡಪ್ಪ ಚಲವಾದಿ, ಶೇಖರ ಢವಳಗಿ, ಶಶಿ ಹಳ್ಳೂರ, ಸಂತೋಷ್ ಮುದ್ದೇಬಿಹಾಳ, ಲಕ್ಷ್ಮಣ ಕಾಳಗಿ ಸೇರಿದಂತೆ ಮತ್ತಿತರರು ಕಟ್ಟಿಮನಿ, ಪ್ರಕಾಶ್ ಹಾದಿಮನಿ, ಇದ್ದರು



### ಸರ್ಕಾರಿ ಪಪೂ ಕಾಲೇಜಿನ ಕೊಠಡಿ ಕಾಮಗಾರಿಗೆ ಭೂಮಿಪೂಜೆ ಸಲ್ಲಿಸಿ ಸಚಿವ ಶಿವಾನಂದ ಪಾಟೀಲ ಸಲಹೆ

# ಗುಣಮಟ್ಟದ ಕಾಮಗಾರಿ ತ್ವರಿತವಾಗಿ ಪೂರ್ಣಗೊಳಿಸಿ

**ಉದಯರಶ್ಮಿ ನ್ಯೂಸ್**



ಬಸವನಬಾಗೇವಾಡಿ: ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಆವರಣದಲ್ಲಿ ಲೋಕೋಪಯೋಗಿ ಇಲಾಖೆಯ 2022–23 ನೇ ಸಾಲಿನ ಲೆಕ್ಕ ಶಿರ್ಷಿಕೆ ನಬಾರ್ಡ್–28 ಅಡಿಯಲ್ಲಿ ಅಂದಾಜು ಮೊತ್ತ ರೂ. 1.58 ಕೋಟಿ ವೆಚ್ಚದಲ್ಲಿ ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಎರಡು ತರಗತಿ ಕೊಠಡಿ, ಎರಡು ಪ್ರಯೋಗಾಲಯ ಕೊಠಡಿ ಹಾಗೂ ಶೌಚಾಲಯ ಕಾಮಗಾರಿ ಹಾಗೂ ಜಿಲ್ಲಾ ಪಂಚಾಯತ ಪಂಚಾಯತ್ ರಾಜ್ ಇಂಜನಿಯರಿಂಗ್ ಇಲಾಖೆ ಉಪವಿಭಾಗದ 2022–23 ನೇ ಸಾಲಿನ ವಿವೇಕ ಪಿಯು ಕಾಲೇಜ ಯೋಜನೆಯಡಿಯಲ್ಲಿ ಅಂದಾಜು ವೆಚ್ಚ ರೂ. 50.10 ಲಕ್ಷ ವೆಚ್ಚದ ಪಟ್ಟಣದ ಸರ್ಕಾರಿ ಬಾಲಕಿಂ–ಯರ ಪದವಿ ಪೂರ್ವ ಕಾಲೇಜಿನ ಕೊಠಡಿ ನಿರ್ಮಾಣ ಕಾಮಗಾರಿಯ ಭೂಮಿ ಪೂಜೆಯನ್ನು ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ಶನಿವಾರ ನೆರವೇರಿಸಿದರು.

ನಂತರ ಸಚಿವರು ಸಂಬಂಧಿಸಿದ ಅಭಿಯಂತರರಿಗೆ, ಗುತ್ತಿಗೆದಾರ–ರಿಗೆ ವಿಶಾಲವಾದ ಕೊಠಡಿಗಳ ನಿರ್ಮಾಣ ಮಾಡುವ ಮೂಲಕ ವಿದ್ಯಾರ್ಥಿಗಳಿಗೆ ಉತ್ತಮ ಕಲಿಕಾ ವಾತಾವರಣ ಉಂಟಾಗುವಂತೆ ಕಟ್ಟಡ ನಿರ್ಮಿಸಬೇಕು. ಗುಣಮಟ್ಟದ ಕಟ್ಟಡ ಕಾಮಗಾ–ರಿಯನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಬೇಕೆಂದು ಸೂಚಿಸಿದರು.

ಇದೇ ಸಂದರ್ಭದಲ್ಲಿ ತಾಲೂಕು ಪಂಚಾಯಿತಿಯ ಅನಿರ್ಬಂಧಿತ ಅನುದಾನದಲ್ಲಿ ವಿಕಲಚೇತನರಾದ ಇಂಗಳೇಶ್ವರ ಬಸತಂಗಪ್ಪ ಜಕ್ಕನಾಳ, ಶಾರದಾ ಪಾಟೀಲ, ಉಕ್ಕಲಿಯ ಮಹ್ಮದಸಾಬ ಜಮಾದಾರ ಅವರಿಗೆ ತ್ರಿಚಕ್ರ ಬೈಕ್ ವಿತರಿಸಿದರು.

ಹಿರೇಮಠದ ಶಿವಪ್ರಕಾಶ ಶಿವಾಚಾರ್ಯ ಸ್ವಾಮೀಜಿ ಸಾನಿಧ್ಯ ವಹಿಸಿದ್ದರು. ಈ ಸಂದರ್ಭದಲ್ಲಿ ರಾಜ್ಯ ಸಹಕಾರ ಮಹಾಮಂಡಳ ನಿರ್ದೇಶಕ ಈರಣ್ಣ ಪಟ್ಟಣಶೆಟ್ಟಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸುರೇಶ ಹಾ–ರಿವಾಳ, ಕಾಲೇಜು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಶೇಖರ ಗೊಳಸಂಗಿ, ಪುರಸಭೆ ಸದಸ್ಯರಾದ ರೇಖಾ ಬೆಕಿನಾಳ, ಜಗದೇವಿ ಗುಂಡಳ್ಳಿ, ಪ್ರವೀಣ ಪವಾರ, ಮುಖಂಡರಾದ ಬಸವರಾಜ ಹಾರಿವಾಳ, ಅನಿಲ ಅಗರವಾಲ, ಸುರೇಶಗೌಡ ಪಾಟೀಲ, ಸುಭಾಸ ಚಿಕ್ಕೊಂಡ, ಸಂಗಮೇಶ ಓಲೇಕಾರ, ಕಮಲಸಾಬ ಕೊರಬು, ಬಸವರಾಜ ಕೋಟಿ,ಶಂಕರಗೌಡ ಬಿರಾದಾರ, ರವಿ ರಾಠೋಡ, ಪರಶುರಾಮ ಜಮಖಂಡಿ, ರುಕ್ಮಿಣಿ ರಾಠೋಡ, ರವಿ ಚಿಕ್ಕೊಂಡ, ನಿಸಾರ ಚೌಧರಿ, ಎಂ.ಜಿ.ಆದಿಗೊಂಡ, ಶೇಖರಗೌಡ ಪಾಟೀಲ, ಸಂಕನಗೌಡ ಪಾಟೀಲ,ಎಸ್.ಎಸ್.ಬಶೆಟ್ಟಿ, ಉದಯ ಮಾಂಗಲೇಕರ, ಅಜೀಜ ಬಾಗವಾನ, ಮಲ್ಲೇಶಿ ಕಡಕೋಳ, ಜಿಪಂ ಎಇಇ ವಸಂತ ರಾಠೋಡ, ಲೋಕೋಪಯೋಗಿ ಇಲಾಖೆಯ ಎಇಇ ಜಿ.ವ್ಹಿ.ಕಿರಸೂರ, ಗುತ್ತಿಗೆದಾರರಾದ ಶಂಕರ ರಾಠೋಡ, ಪರಶುರಾಮ ರುಕ್ಮೋಜಿಗೋಳ, ಕಾಶಿನಾಥ ರಾಠೋಡ ಇತರರು ಇದ್ದರು.

# ಕಾನ್ನಾಳಕ್ಕೆ ಬಸ್ ಸೇವೆ ಪುನಾರಂಭ :ಗ್ರಾಮಸ್ಥರು ಹರ್ಷ

**ಉದಯರಶ್ಮಿ ನ್ಯೂಸ್**



ಬಸವನಬಾಗೇವಾಡಿ: ತಾಲೂಕಿನ ಕಾನ್ನಾಳ ಗ್ರಾಮಕ್ಕೆ ಮುದ್ದೇಬಿಹಾಳ ಘಟಕದಿಂದ ಪ್ರತಿನಿತ್ಯ ಬೆಳಗ್ಗೆ ಮುದ್ದೇಬಿಹಾಳದಿಂದ ಬರುತ್ತಿದ್ದ ಬಸ್ ಸೇವೆ ಪುನಾರಂಭಗೊಂಡಿದ್ದ–ರಿಂದ ಶನಿವಾರ ಗ್ರಾಮಸ್ಥರು ಬಸ್ ಅನ್ನು ಮದುವಣಗಿತ್ತಿಯಂತೆ ಸಿಂಗರಿಸಿ ಪೂಜೆ ಸಲ್ಲಿಸಿ ಬಸ್ ಸೇವೆ ಪುನಾರಂಭಗೊಂಡಿರುವುದಕ್ಕೆ ಹರ್ಷ ವ್ಯಕ್ತಪಡಿಸಿದರು.

ಗ್ರಾಮದಿಂದ ಪ್ರತಿನಿತ್ಯ ಬೆಳಗ್ಗೆ ಮುದ್ದೇಬಿಹಾಳ ಕಾಲೇಜಿನ ವಿದ್ಯಾಭ್ಯಾಸಕ್ಕೆ ತೆರಳುವ ವಿದ್ಯಾರ್ಥಿಗಳಿಗೆ, ವಿವಿಧ ಕೆಲಸಗಳಿಗೆ ತೆರಳುವ ಗ್ರಾಮಸ್ಥರಿಗೆ ಬಸ್ ಇಲ್ಲದೇ ಇರುವದರಿಂದಾಗಿ ತುಂಬಾ ತೊಂದರೆಯಾಗಿತ್ತು. ಇದನ್ನು ಮನಗಂಡ ಗ್ರಾಮದ ಯುವಮುಖಂಡ, ಪತ್ರಕರ್ತ ರಾಜಶೇಖರ ಸಜ್ಜನ ಅವರು ಗ್ರಾಮದ ವಿದ್ಯಾರ್ಥಿಗಳಿಗೆ, ಗ್ರಾಮಸ್ಥರಿಗೆ ಆಗುತ್ತಿರುವ ತೊಂದರೆ ಕುರಿತು ಮುದ್ದೇಬಿಹಾಳ ಘಟಕದ ವ್ಯವಸ್ಥಾಪಕರ ಗಮನಕ್ಕೆ ತರುವ ಮೂಲಕ ಮೊದಲಿನಂತೆ ಮುದ್ದೇಬಿಹಾಳದಿಂದ ಗ್ರಾಮಕ್ಕೆ ಬಸ್ ಬರುವಂತೆ ಮನವಿ ಮಾಡಿಕೊಂಡಿದ್ದರಿಂದ ಬಸ್ ಸೇವೆ ಪುನಾರಂಭಗೊಂಡಿದೆ.

ಇದೇ ಸಂದರ್ಭದಲ್ಲಿ ಬಸ್ ಚಾಲಕ ಹಾಗೂ ನಿರ್ವಾಹಕರನ್ನು ಗ್ರಾಮಸ್ಥರು ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಗ್ರಾಮದ ಪ್ರಮುಖರಾದ ಬಸಯ್ಯ ಮಠಪತಿ, ಶಿವಪ್ಪ ಹೂಗಾರ, ಅರವಿಂದ ಹೂಗಾರ, ಬಸವರಾಜ ಸಜ್ಜನ, ರಾಜು ನಾಟೀಕಾರ, ಸಂಗಪ್ಪ ಬಳಿಗಾರ, ಅಕ್ಬರ್ ಚಪ್ಪರಬಂದ, ಮಹಿಬೂಬ ಚಪ್ಪರಬಂದ, ಪ್ರಭು ಕೊರಣ್ಣನವರ, ರಾಜು ಮೇಲಿನಮನಿ,ಗುರುಲಿಂಗಯ್ಯ ಮ್ಯಾಗೇರಿ ಇತರರು ಇದ್ದರು.

# ಕರ್ತವ್ಯಕ್ಕೆ ಹಾಜರಾಗಲು ಸೂಚನೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ಚಡಚಣ ತಾಲೂಕಿನ ಬರಡೋಲಾ ಗ್ರಾಮದ ಸರ್ಕಾರಿ ಉರ್ದು ಕಿರಿಯ ಪ್ರಾಥಮಿಕ ಶಾಲಾ ಶಿಕ್ಷಕಿಯಾದ ಬೀಬಿಆಯಿಶಾ ಅಬ್ದುಲ್‌ಅಜೀಬ್ ಖಾಜಿ ಅವರು ದಿನಾಂಕ 31–05–2023ರಿಂದ ಶಾಲಾ ಕರ್ತವ್ಯಕ್ಕೆ ಅನಧಿಕೃತ ಗೈರು ಆಗಿದ್ದು, ಅವರು ಈ ಕೂಡಲೇ ಕರ್ತವ್ಯಕ್ಕೆ ಹಾಜರಾಗುವಂತೆ ಚಡಚಣ ಕ್ಷೇತ್ರ ಶಿಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಂಬಂಧಗಳು

**ಭಾವರಶ್ಮಿ**



– ಗಣೇಶ್ ಜಗನ್ನಾಥ್.

("ನಮ್ಮ ಕಥಾ ಅರಮನೆ" ಬರಹಗಾರರು)

**ಉದಯರಶ್ಮಿ ದಿನಪತ್ರಿಕೆ**

ಒಂದು ಕುಟುಂಬ. ಯಜಮಾನ, ಅವನ ಹೆಂಡತಿ, ಮಗಳು ಮತ್ತು ಮಗ ಇರುವ ಚಿಕ್ಕ, ಚೊಕ್ಕ ದೈವಭಕ್ತಿಯುಳ್ಳ ಕುಟುಂಬ.

ಒಂದು ದಿನದ ಯಜಮಾನ ಮನೆಗೆ ಬಂದು ಹೆಂಡತಿಗೆ ಹೇಳುತ್ತಾನೆ. ನಾಳೆ ನಾನು ಸಾಯುವವನಿದ್ದೇನೆ. ಊರಿನ ಹಿತಕ್ಕಾಗಿ ಈ ನಿರ್ಧಾರ. ನೀನು ಚಿಂತಿಸಬೇಡ. ದೈರ್ಯವಾಗಿ ಇರು ಎಂದು. ಹೆಂಡತಿಗೆ ಸಿಡಿಲು ಬಡಿದ ಹಾಗೆ ಆಗುತ್ತದೆ. ಆಕೆ ಕಾರಣವನ್ನು ಕೇಳುತ್ತಾಳೆ. ಈತ ವಿವರಿಸುತ್ತಾನೆ.

ವಿವರಣೆ ಕೇಳಿದ ಬಳಿಕ ಹೆಂಡತಿ ಹೇಳುತ್ತಾಳೆ. ನೀವು ಸಾಯುವ ಅಗತ್ಯವಿಲ್ಲ. ಊರಿನ ಹಿತಕ್ಕಾಗಿ ನಾನು ಸಾಯುತ್ತೇನೆ. ಅನುಮತಿ ಕೊಡಿ . ಗಂಡ ಹೇಳುತ್ತಾನೆ. ಸಾಧ್ಯವಿಲ್ಲ. ನಿನ್ನನ್ನು ಮದುವೆಯಾದಾಗ ನನ್ನ ಉಸಿರು ಇರುವವರೆಗೂ ನಿನ್ನ ಕೈ ಬಿಡುವುದಿಲ್ಲವೆಂದೂ ಮತ್ತು ಪ್ರಾಣಕ್ಕಿಂತ ಹೆಚ್ಚಾಗಿ ಕಾಪಾಡುವೆನೆಂದು ಶಪಥ ಮಾಡಿರುತ್ತೆನೆ. ಅದು ಅಲ್ಲದೆ ನೀನಿಲ್ಲದೆ





ಮಕ್ಕಳು ತಬ್ಬಲಿಯಾಗುತ್ತಾರೆ. ಆದ–ಕಾರಣದಿಂದ ನಿನ್ನ ನಿರ್ಧಾರ ಸಾಧ್ಯವಿಲ್ಲ. ಇಬ್ಬರೂ ಚಿಂತಿತರಾಗಿ ಇರುತ್ತಾರೆ.

ಇವರ ಮಾತನ್ನು ಅಲಿಸಿದ ಮಗಳು ಹೇಳುತ್ತಾಳೆ. ಊರ ಹಿತಕ್ಕಾಗಿ ನಾನು ಸಾಯುತ್ತೇನೆ, ನೀವು ಚಿಂತೆ ಬಿಡಿಯೆಂದು. ತಂದೆ ಹೇಳುತ್ತಾನೆ ಮಗಳೇ ಸಾಧ್ಯವಿಲ್ಲವೆಂದು. ನಿನ್ನನು ಸಾಕಿ ಬೇರೆಯವರಿಗೆ ಕನ್ಯಾದಾನ ಮಾಡುವುದು ನಮ್ಮ ಕರ್ತವ್ಯ. ಬೇರೆಯುವರ ಮನೆ ಬೆಳಗಬೇಕು, ನಿನ್ನಿಂದ ಒಂದು ಪರಿವಾರ ಸೃಷ್ಟಿಯಾಗಬೇಕು. ಆಗಲೇ ನಮಗೆ ಸಮಾಧಾನ. ಅದು ಅಲ್ಲದೆ ನಿನ್ನ ಮೇಲೆ ನಮಗೆ ಬೇರವಾ ಅಧಿಕಾರವೂ ಇರುವುದಿಲ್ಲ. ಆದುದರಿಂದ ನಿನ್ನ ನಿರ್ಧಾರ ಸಲ್ಲದು.

ಇದೆಲ್ಲವನ್ನೂ ಕೇಳಿದ ಮಗ ಊರ ಹಿತಕ್ಕಾಗಿ ತಾನು ಸಾಯುವುದಾಗಿ ಹೇಳುತ್ತಾನೆ. ತಂದೆ ಇವನ ಮಾತನ್ನು ತಿರಸ್ಕರಿಸುತ್ತಾನೆ . ನೀನು ನಮ್ಮ ವಂಶೋದ್ಧಾರಕ. ನಿನ್ನಿಂದ ನಮ್ಮ ವಂಶ ಬೆಳೆಯಬೇಕು. ಮುಂದೆ ನೀನು ಮಾಡುವ ಕಾರ್ಯದಿಂದಲೇ ನಮಗೆ ಸದ್ಗತಿ ದೊರಕುವುದು. ಅದೂ ಅಲ್ಲದೆ ಮಕ್ಕಳನ್ನು ಕಳೆದುಕೊಂಡು ನಾವು ಜೀವಿಸುವಾದರೂ ಹೇಗೆ? ಆದ–ಕಾರಣದಿಂದ ನಿನ್ನ ನಿರ್ಧಾರಕ್ಕೆ ನಮ್ಮ ಸಮ್ಮತಿ ಇಲ್ಲ.

ಮೇಲೆ ಹೇಳಿದ ಪ್ರಸಂಗ ಮಹಾಭಾರತದಲ್ಲಿ ಇರುವಂತದ್ದು. ಏಕಶಿಲಾ ನಗರದಲ್ಲಿ ಬಕಾಸುರನಿಗೆ ದಿನದ ಒಬ್ಬರನ್ನು ಆಹಾರವಾಗಿ ಒಪ್ಪಿಸಬೇಕಾಗಿತ್ತು. ಸರದಿಯಂತೆ ಒಂದು ಕುಟುಂಬದಿಂದ ಒಬ್ಬರನ್ನು ಕಳುಹಿಸಲು ತೀರ್ಮಾನವಾಗಿತ್ತು. ನಾಳಿನ ಪಾಳಿ ಮೇಲೆ ಹೇಳಿದ ಕುಟುಂಬದವರ ಸರದಿ

# ಪಯಣ

**ಉದಯರಶ್ಮಿ ದಿನಪತ್ರಿಕೆ**

**ಕಾವ್ಯರಶ್ಮಿ**

– ಲಲಿತಾ ರಾಧಾಕೃಷ್ಣ


("ನಮ್ಮ ಕಥಾ ಅರಮನೆ" ಬರಹಗಾರರು)



ಕಷ್ಟ ಸುಖಗಳೆಂಬ ಅಲೆಗಳ ಮಧ್ಯದಲಿ
ಸಂಸಾರ ಸಾಗರದ ಬಾಳೆಂಬ ನೌಕೆಯಲಿ
ಈಜುತ್ತಾ ತೇಲುತ್ತ ಪಯಣ ಸಾಗುತಲಿ
ಹೆದರದೆ ಬಂದದ್ದೆಲ್ಲ ಬರಲೆನುತಲಿ

ನಡೆಸುವ ಜೀವನ ಜೋಡಿ ಎತ್ತುಗಳಂತೆ
ಜೀವನ ಚಕ್ರವು ಚಲಿಸುವ ಗಾಡಿಯಂತೆ
ದಾರಿಯ ಪಯಣ ಮುಗಿಸಲು ಸಿದ್ದರಾಗಲು
ವಯಸ್ಸಯಿತೆಂದು ಮರುಗದೆ ಶಾಂತ ಮನಸಿನಲು

ಮಕ್ಕಳ ಸಾಕುತ ವಂಶದ ಕುಡಿಯ ಬೆಳೆಸುತ
ಬರುವಾಗ ತಂದಿಲ್ಲ ಹೋಗುವಾಗೇನಿಲ್ಲೆನುತ
ಬರುವುದು ಪಾಪ ಪುಣ್ಯದ ಗಂಟೆನುತ
ಪಯಣ ಸಾಗಿಸುತ ಹೋಗಲೇ ಬೇಕೆನುತ



# ಲೋಕ್ ಅದಾಲತ್: 1416 ಪ್ರಕರಣಗಳು ಇತ್ಯರ್ಥ

**ಉದಯರಶ್ಮಿ ನ್ಯೂಸ್**




ಮುದ್ದೇಬಿಹಾಳ: ತಾಲೂಕು ಕಾನೂನು ಸೇವಾ ಸಮಿತಿಯ ವತಿಯಿಂದ ಇಲ್ಲಿನ ನ್ಯಾಯಾಲಯಗಳ ಸಂಕೀರ್ಣದಲ್ಲಿ ಶನಿವಾರ ರಾಷ್ಟ್ರೀಯ ಲೋಕ ಅದಾಲತನ್ನು ಏರ್ಪಡಿಸಲಾಗಿತ್ತು.

ಎರಡು ನ್ಯಾಯಾಲಯಗಳಿಗೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಿ ಒಟ್ಟು 6556 ಬಾಕಿ ಇರುವ ಪ್ರಕರಣಗಳಲ್ಲಿ 2237 ಪ್ರಕರಣಗಳನ್ನು ಕೈಗೆತ್ತಿಕೊಳ್ಳಲಾಗಿದ್ದು ಈ ಪೈಕಿ ಒಟ್ಟು 1416 ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಇತ್ಯರ್ಥ–ಪಡಿಸಲಾಯಿತು. ಇದರಲ್ಲಿ ಅಪರಾಧ ಪ್ರಕರಣಗಳು, ಎಂವಿಸಿ ಪ್ರಕರಣಗಳು, ಚೆಕ್ ಬೌನ್ಸ್ ಪ್ರಕರಣಗಳು, ಮೆಂಟೇನೆನ್ಸ್ ಪ್ರಕರಣಗಳು, ಪಾಲು ವಾಟ್ನಿ ದಾವೆಗಳು, ಎಲ್ಎಸಿ–ಇಪಿ ಪ್ರಕರಣಗಳು, ಎಮ್ವಿಸಿ–ಇಪಿ ಪ್ರಕರಣಗಳು, ಅಪರಾಧ ದಂಡ ಪ್ರಕರಣಗಳು ಸೇರಿದಂತೆ ಅಬಕಾರಿ ಇಲಾಖೆಯ ಪ್ರಕರಣಗಳನ್ನು ರಾಜಿ ಸಂಧಾನ ಮೂಲಕ ಇತ್ಯರ್ಥ–ಪಡಿಸಲಾಯಿತು. ಅಲ್ಲದೇ ಪೂರ್ವದಾವೆ ಪ್ರಕರಣಗಳಲ್ಲಿ, ಕಂದಾಯ ಇಲಾಖೆಯ ಕಂದಾಯ ಅದಾಲತ್ ಪ್ರಕರಣಗಳು ಹಾಗೂ ಬ್ಯಾಂಕಿನ ಪ್ರಕರಣಗಳು ಸೇರಿ ಒಟ್ಟು 2881 ಪ್ರಕರಣಗಳಲ್ಲಿ 1388 ಪ್ರಕರಣಗಳನ್ನು ತಾಲೂಕು ಕಾನೂನು ಸೇವಾ ಸಮಿತಿಯ ಅಧ್ಯಕ್ಷೆ ಲಕ್ಷ್ಮೀ ನಿಂಗಪ್ಪ ಗರಗ ಹಾಗೂ ಸದಸ್ಯ ಕಾರ್ಯದರ್ಶಿ ಸಂಪತಕುಮಾರ ಬಳೂಲಗಿಡದ ಇವರುಗಳು ರಾಜೀಸಂಧಾನದ ಮೂಲಕ ಇತ್ಯರ್ಥಪಡಿಸಿದರು.

ನ್ಯಾಯಾಂಗ ಸಂಧಾನಕಾರರಾಗಿ ರೇಣುಕಾ ಪಾಟೀಲ ಹಾಗೂ ಶೋಭಾ ಪಾಟೀಲ, ಸರಕಾರಿ ವಕೀಲರಾದ ಬಸವರಾಜ ಆಹೇರಿ, ಅಪರ ಸರ್ಕಾರಿ ವಕೀಲ ಎಚ್.ಎಲ್.ಸರೂರ, ನ್ಯಾಯವಾದಿಗಳ ಸಂಘದ ಅಧ್ಯಕ್ಷ ಶಶಿಕಾಂತ ಮಾಲಗತ್ತಿ, ತಾಲೂಕಾ ಕಾನೂನು ಸೇವಾ ಸಮಿತಿಯ ಆಡಳಿತ ಸಹಾಯಕ ಅರವಿಂದ ಕುಂಬಾರ, ಶಿರಿಸ್ತೇದಾರರಾದ ಎಸ್.ಎಸ್.ಚಕ್ರಮನಿ ಮತ್ತು ಸುರೇಶ ಬಳಗಾನೂರ, ನ್ಯಾಯಾಲಯದ ಸಿಬ್ಬಂದಿಗಳಾದ ಎಮ್.ಎಫ್.ಜೇವರಗಿ, ಎ.ಆರ್.ಮುಜಾವರ, ಪ್ರಸನ್ನ, ನರ್ಮದಾ ಮರೋಳ, ಅಮಿದಾ ನದಾಫ್, ಎಮ್.ಎಸ್.ಸಾಲಿಮಠ, ಪಿ.ಎಲ್.ಗಾಯಕವಾಡ, ಕಾವೇರಿ ರಾಠೋಡ, ಮಹಾಂತೇಶ್ ಹಚರೆಡ್ಡಿ, ರಾಜೇಶ್ವರಿ, ಮಧು ಧರ್ಮಗಿರಿ, ಎಸ್.ಎಸ್.ಹರನಾಳ, ಮೀನಾಕ್ಷಿ ದೊಡಮನಿ, ಗೀತಾ ರಾಂಪುರ, ಚೆನ್ನಮ್ಮ ಬಾಗೇವಾಡಿ, ಮಂಜುಳಾ ಕಟ್ಟಿಮನಿ, ನೀಲಮ್ಮ ಬಡಿಗೇರ. ಶ್ರುತಿ ಜಾಯಿ, ನಾಗೇಶ ಮಾದಿಹಳ್ಳಿ, ಸುಷ್ಮಾ ಬಾನಿ ಹಾಗೂ ನ್ಯಾಯವಾದಿಗಳಾದ ಸಿ.ಆರ್.ಜೋಶಿ, ಜೆ.ಎ.ಚಿನಿವಾರ, ಎಸ್.ಆರ್.ಸಜ್ಜನ, ಏನ್.ಜಿ.ಕುಲಕರ್ಣಿ, ಏನ್.ಆರ್.ಮೋಕಾಶಿ, ಎಮ್.ಆರ್.ಪಾಟೀಲ, ಎಮ್.ಎಚ್.ಕ್ವಾರಿ, ಚೇತನ ಶಿವಶಿಂಪಿ, ಎಸ್.ಆರ್.ಜೋಗಿ, ಎಸ್.ಎಂ.ಕಿಣಗಿ, ಪಿ.ಎನ್.ಬಿರಾದಾರ, ಎಲ್.ಎಸ್.ಮೇಟಿ, ಬಿ.ಎಮ್.ಮುಂದಿನಮನಿ, ಆಯ್.ಎಸ್.ಹಗಟಗಿ. ಎಮ್.ಎ.ಲಿಂಗಸೂರ, ಎಲ್.ಆರ್.ನಾಲತವಾಡ, ಏನ್.ಬಿ.ಮುದ್ನಾಳ, ಎಸ್.ಎಚ್.ಚಳ್ಳಗಿ, ಎಸ್.ಆರ್.ಅಮರಣ್ಣವರ, ಎಚ್.ಟಿ.ಪೂಜಾರಿ, ಬಸವರಾಜ ಚಿನಿವಾರ, ಪಿ.ಎ.ಹಿರೇಮಠ, ಎಂ.ಆರ್.ಪಾಟೀಲ, ಎಸ್.ಸಿ.ಹಿರೇಮಠ ಸೇರಿದಂತೆ ಮತ್ತೀತರರು ಇದ್ದರು.

# ದೇಹದಾನದ ಬಗ್ಗೆ ಜಾಗೃತಿ ಅಗತ್ಯ :ಕುಲಕರ್ಣಿ

**ಉದಯರಶ್ಮಿ ನ್ಯೂಸ್**



ಬಸವನಬಾಗೇವಾಡಿ: ಜಗತ್ತಿನಲ್ಲಿರುವ ಎಲ್ಲ ದಾನಗಳು ಶ್ರೇಷ್ಠ. ಅದರಲ್ಲಿಯೂ ರಕ್ತದಾನ, ದೇಹದಾನ ಅತಿಶ್ರೇಷ್ಠವಾಗಿದೆ ಎಂದು ಉಡುಪಿ ಸಮಾನ ಮನಸ್ಕ ಕನ್ನಡಿಗರ ವೇದಿಕೆಯ ಅಧ್ಯಕ್ಷ ಶ್ರೀನಿವಾಸರಾವ ಕುಲಕರ್ಣಿ ಹೇಳಿದರು.

ಪಟ್ಟಣದ ಅಸ್ಕಿ ಪ್ಯಾರಾ ಮೆಡಿಕಲ್ ಕಾಲೇಜಿನಲ್ಲಿ ಡಾ.ನೀರಜ್ ಪಾಟೀಲ ಅಭಿಮಾನ ಬಳಗವು ಶನಿವಾರ ಹಮ್ಮಿಕೊಂಡಿದ್ದ ದೇಹದಾನದ ಜಾಗೃತಿ ಅಭಿಯಾನ ಕಾರ್ಯಕ್ರಮವನ್ನು ಸಸಿಗೆ ನೀರುಣಿಸುವ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು, ಮನುಷ್ಯ ಸತ್ತ ಮೇಲೆ ಹೂಳಿದರೆ, ಸುಟ್ಟರೆ ದೇಹದ ಅಂಗಾಂಗ ನಾಶವಾಗಿ ಹೋಗುತ್ತದೆ. ಅದೇ ಸತ್ತ ದೇಹವನ್ನು ದಾನ ಮಾಡಿದರೆ ಕೆಲವು ಅಂಗಾಂಗಗಳು ಕೆಲವರಿಗೆ ನೆರವಾಗುವ ಮೂಲಕ ಅವರಿಗೆ ಜೀವದಾನ ಮಾಡಲು ಸಾಧ್ಯವಾಗುತ್ತದೆ. ಮಾನವನಾಗಿ ಜನಿಸಿದ ಮೇಲೆ ಉಪಕಾರ ಮಾಡದಿದ್ದರೂ ಸತ್ತ ಮೇಲೆ ದೇಹ ದಾನಮಾಡಿದರೆ ಮೋಕ್ಷ ಪ್ರಾಪ್ತಿಯಾಗುತ್ತದೆ. ನಾಗರಿಕ ಬಂಧುಗಳಿಗೆ ದೇಹದಾನ ಬಗ್ಗೆ ಜಾಗೃತಿ ಮೂಡಿಸುವ ಅಗತ್ಯವಿದೆ. ಯುವಜನತೆ ದೇಹ ದಾನ ಮಾಡಲು ಮುಂದಾಗಲು ಧೈರ್ಯ ಮಾಡಬೇಕಿದೆ ಎಂದರು.

ಡಾ.ನೀರಜ್ ಪಾಟೀಲ ಅಭಿಮಾನಿ ಬಳಗದ ಅಧ್ಯಕ್ಷ ಡಾ.ಅಮರೇಶ ಮಿಣಜಗಿ ಮಾತನಾಡಿ, ಯಾವುದೇ ವ್ಯಕ್ತಿ ಜೀವ ಹೋದ ಮೇಲೆ ಆ ದೇಹ ಸುಡುವುದು, ಮಣ್ಣು ಮಾಡುವ ಬದಲಿಗೆ ನಮ್ಮ ಗಮನಕ್ಕೆ ತಂದರೆ ಆ ದೇಹದಲ್ಲಿನ ಆರೋಗ್ಯಯುತವಾದ ಅಂಗಾಂಗಳನ್ನು ಅವುಗಳ ಕೊರತೆಯಿಂದ ಬಳುತ್ತಿರುವ ವ್ಯಕ್ತಿಗೆ ಅಳವಡಿಸಲು ಸಹಾಯ ಮಾಡುತ್ತೇವೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಅಸ್ಕಿ ಪ್ಯಾರಾ ಮೆಡಿಕಲ್ ಕಾಲೇಜಿನ ಪ್ರಾಂಶುಪಾಲ ಎಂ.ಎಸ್.ಕರ್ಜಗಿ ಮಾತನಾಡಿ, ಮನುಷ್ಯ ಜೀವಂತ ಇರುವಾಗಲೇ ಕಿಡ್ನಿ, ಕಣ್ಣು, ಲಿವರ್ ದಾನ ಮಾಡಬಹುದು. ಸತ್ತಾಗ ಅವಯವಗಳನ್ನು ದಾನ ಮಾಡಿ ಪುಣ್ಯ ಗಳಿಸಿಕೊಳ್ಳಬೇಕೆಂದರು.

ಕಾಶೀನಾಥ ಅವಟಿ, ಡಾ. ಎಸ್.ಎಸ್.ಡಂಬಳ ಮಾತನಾಡಿದರು.

ಸಂತೋಷ ಪಟೇದ ಸ್ವಾಗತಿಸಿ,ನಿರೂಪಿಸಿದರು.

# ರಾಷ್ಟ್ರೀಯ ಕಿಶೋರ ಸ್ವಾಸ್ಥ ಕಾರ್ಯಕ್ರಮ

**ಉದಯರಶ್ಮಿ ನ್ಯೂಸ್**




ಚಡಚಣ: ಸಮೀಪದ ಹಾಳೊಳ್ಳಿ ಗ್ರಾಮದ ಮುರಾರ್ಜಿ ಪ್ರೌಢ ಶಾಲೆಯಲ್ಲಿ ಶನಿವಾರ ನಡೆದ ರಾಷ್ಟ್ರೀಯ ಕಿಶೋರ ಸ್ವಾಸ್ಥ ಕಾರ್ಯಕ್ರಮ ನಡೆಯಿತು.

ಈ ವೇಳೆ ಮಾತನಾಡಿದ ಚಡಚಣ ತಾಲೂಕಾ ಆಪ್ತ ಸಮಾಲೋಚಕ ಪ್ರಶಾಂತ ಸಾಳುಂಕೆ ಅವರು, ಮಕ್ಕಳು ದೈಹಿಕ ಹಾಗೂ ಮಾನಸಿಕವಾಗಿ ಆರೋಗ್ಯ ಇದ್ದರೆ ಸಾಮಾಜಿಕವಾಗಿ ಮುಂದೆ ಬರಬಹುದು. ಉತ್ತಮ ಗುಣಮಟ್ಟದ ಪೌಷ್ಟಿಕ ಆಹಾರ ಸೇವನೆ ಜತೆಗೆ ವ್ಯಾಯಾಮ, ಯೋಗಾಭ್ಯಾಸ ಮಾಡುವದು ರೂಡಿಸಿಕೊಳ್ಳಬೇಕು ಎಂದರು.

ಆಯುಷ್ಯಮಾನ ಕಾರ್ಡ್ ಹೊಂದಿದದವರು ಲಕ್ಷಾಂತರ ರೂ. ಉಚಿತ ವೈದ್ಯಕೀಯ ಸೇವೆಗಳನ್ನು ಪಡೆಯಬಹುದು ಎಂದ ಆರೋಗ್ಯ ಮಿತ್ರ ಸಂಜೀವ ರೋಗಿ ಅವರು, ವಿದ್ಯಾರ್ಥಿಗಳಿಗೆ ಮತ್ತು ಗ್ರಾಮಸ್ಥರಿಗೆ ಮಾಹಿತಿಯನ್ನು ನೀಡಿದರು.

ಪೌಷ್ಟಿಕ ಆಹಾರ ನಮಗೆ ಅತಿ ಮುಖ್ಯವಾಗಿದೆ ಆದ ಕಾರಣ ನಾವು ಪೌಷ್ಟಿಕ ಆಹಾರ ಸೇವಿಸಬೇಕು ಮತ್ತು ಆರೋಗ್ಯಯುತ ಜೀವನ ನಡೆಸಬೇಕಾದರೆ ತಂಬಾಕು ಮತ್ತು ದುಷ್ಟ ಚಟಗಳು ಮತ್ತು ಜಂಕ್ಸ ಫುಡ್ ಉತ್ಪನ್ನಗಳ ಸೇವನೆಯಿಂದ ದೂರ ಇರಬೇಕು ಎಂದು ಎನ್.ಸಿ.ಡಿ ಆಪ್ತಸಮಾಲೋಚಕ ಕುಮಾರ ರಾಠೋಡ ಹೇಳಿದರು.

ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಆರ್ ಬಿ ಲಾಲಸಂಗಿ ಮಾತನಾಡಿದರು.

ಶಾಲೆಯ ಮುಖ್ಯ ಗುರು ಹೆಬ್ಬಾಲಕರ್ ಮತ್ತು ಸಿಬ್ಬಂದಿ ಇದ್ದರು.

# ಮಠಗಳು ಸಂಸ್ಕಾರದ ತಾಣಗಳು :ಮಾಗಣಗೇರಿ ಶ್ರೀ

**ಉದಯರಶ್ಮಿ ನ್ಯೂಸ್**




ಕಲಕೇರಿ: ಸನಾತನ ಕಾಲದಿಂದಲೂ ಮಠಮಾನ್ಯಗಳಿಗೆ ತನ್ನದೇ ಆದ ವಿಶೇಷ ಘನತೆ ಗೌರವದ ಸ್ಥಾನವಿದ್ದು, ಮಠಗಳು ಸಮಾಜವನ್ನು ತಿದ್ದಿ ತೀಡಿ ಅವರನ್ನು ಧರ್ಮದ ಮಾರ್ಗದಲ್ಲಿ ನಡೆಯುವಂತೆ ಮಾಡುವ ಗುರುತರವಾದ ಜವಾಬ್ದಾರಿಯನ್ನು ನಿಭಾಯಿಸಿಕೊಂಡು ಬಂದಿದ್ದು, ಅವು ನಿರಂತರವಾಗಿ ಅನ್ನ, ಅರಿವು ಮತ್ತು ಶಿಕ್ಷಣದ ಜೊತೆಗೆ ಸಂಸ್ಕಾರ ನೀಡುವ ತಾಣಗಳಾಗಿವೆ ಎಂದು ಮಾಗಣಗೇರಿಯ ಡಾ. ವಿಶ್ವಾರಾಧ್ಯ ಶಿವಾಚಾರ್ಯ ಶ್ರೀಗಳು ಹೇಳಿದರು.

ಗ್ರಾಮದ ಗುರುಮರುಳಾರಾಧ್ಯರ ಹಿರೇಮಠದಲ್ಲಿ ಶುಕ್ರವಾರ ಸಂಜೆ ನಡೆದ ಲಿಂ.ಬಸವಲಿಂಗ ಮರುಳಸಿದ್ದ ಶಿವಾಚಾರ್ಯರ ಪುಣ್ಯಸ್ಮರಣೋತ್ಸವದ ನಿಮಿತ್ಯ ತಿಂಗಳ ಪರ್ಯಂತ ನಡೆಯಲಿರುವ ಮಹಾಶಿವಶರಣೆ ಸಜ್ಜಲಗುಡ್ಡದ ಶರಣಮ್ಮ ತಾಯಿಯ ಮಾಹಾಪುರಾಣಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಕಲಕೇರಿಯ ಗುರುಮರುಳಾರಾಧ್ಯರ ಹಿರೇಮಠಕ್ಕೆ ಶತಶತಮಾನಗಳ ಇತಿಹಾಸವಿದ್ದು ಮಹಾದಾಸೋಹಿ ಕಲಬುರ್ಗಿಯ ಶರಣಬಸಪ್ಪನಿಗೆ, ಕಡಕೋಳದ ಮಡಿವಾಳಪ್ಪನಿಗೆ ದೀಕ್ಷೆ ಕೊಟ್ಟ ಕೀರ್ತಿ ಕಲಕೇರಿ ಹಿರೇಮಠದ ಗುರುಪರಂಪರೆಗೆ ಸಲ್ಲುತ್ತದೆ, ಪ್ರಸ್ತುತ ಶ್ರೀಮಠದ ಪೀಠಾಧಿಪತಿಗಳಾದ ಸಿದ್ದರಾಮ ಶಿವಾಚಾರ್ಯರು ಹತ್ತು ಹಲವು ಧಾರ್ಮಿಕ, ಸಾಮಾಜಿಕ ಕಾರ್ಯಗಳನ್ನು ಮಾಡುತ್ತಾ ಬಂದಿದ್ದು, ಭಕ್ತರು ತಮ್ಮ ಸಂಸಾರದ ಜಂಜಾಟದ ಮಧ್ಯ ಗುರುಗಳ ಮಾರ್ಗದರ್ಶನದಲ್ಲಿ ಪುರಾಣ ಪುಣ್ಯಕಥೆಗಳನ್ನು ಕೇಳುವುದರ ಮೂಲಕ ಜೀವನ ಸಾರ್ಥಕಪಡಿಸಿಕೊಳ್ಳಬೇಕು ಎಂದು ಹೇಳಿದರು.

ಪುರಾಣಿಕರಾದ ಯಾಳಗಿ ಸೋಮಶೇಖರಮಠದ ಬಸಯ್ಯ ಶಾಸ್ತ್ರಿಗಳು ಸಜ್ಜಲಗುಡ್ಡದ ಶರಣಮ್ಮ ತಾಯಿಯ ಪುರಾಣವನ್ನು ಪ್ರಾರಂಭಿಸುವ ಮೂಲಕ ವಿದ್ಯುಕ್ತವಾಗಿ ಚಾಲನೆ ನೀಡಿದರು.

ಗವಾಯಿಗಳಾದ ಸಂಗಮೇಶ ನೀಲಾ ಮತ್ತು ಮಹಾಂತೇಶ ಕಾಳಗಿ ಅವರು ಸಂಗೀತ ಕಾರ್ಯಕ್ರಮ ನಡೆಸಿಕೊಟ್ಟರು.

ವಿರುಪಾಕ್ಷಯ್ಯ ಹಿರೇಮಠ ಹಂಪಿ, ಶಾಂತಗೌಡ ಬಿ. ಪಾಟೀಲ, ಬಿಜೆಪಿ ಮುಖಂಡ ಸಿದ್ದು ಬುಳ್ಳಾ ಮಾತನಾಡಿದರು.

ಕಲಕೇರಿಯ ಸಂಸ್ಥಾನ ಗದ್ದುಗೆಮಠದ ಗುರುಮಡಿವಾಳೇಶ್ವರ ಶಿವಾಚಾರ್ಯರು, ಕೆರುಟಗಿ ಸಿದ್ಧರಾಮೇಶ್ವರ ಮಠದ ಶಿವಬಸವ ಶಿವಾಚಾರ್ಯರು ಕಾರ್ಯಕ್ರಮದ ನೇತೃತ್ವ ವಹಿಸಿದ್ದರು. ಕಲಕೇರಿ ಹಿರೇಮಠದ ಪೀಠಾಧಿಪತಿಗಳಾದ ಸಿದ್ದರಾಮು ಶಿವಾಚಾರ್ಯರು ಅಧ್ಯಕ್ಷತೆ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಸಣ್ಣಶರಭಯ್ಯ ಗದ್ದಗಿಮಠ, ಕಾಶೀನಾಥ ಹಿರೇಮಠ, ಮಲ್ಲಯ್ಯ ಹಿರೇಮಠ, ಶರಣಯ್ಯ ಮಠಪತಿ, ಪ್ರಭುಗೌಡ ಬಿರಾದಾರ ಅಸ್ಕಿ, ದೇವಿಂದ್ರ ಜಂಬಗಿ, ಸಿ.ಎಸ್.ಹಿರೇಮಠ, ಸಂಗನಗೌಡ ಬಿರಾದಾರ, ಷಣ್ಮುಖಪ್ಪ ಝುಳಕಿ, ಶರಣಪ್ಪ ಮೋಪಗಾರ, ಮಹಾಂತೇಶ ಮೂಲಿಮನಿ, ಸೇರಿದಂತೆ ಇತರರು ಇದ್ದರು.

# ಬುದ್ಧಿಮಾಂದ್ಯ ಮಕ್ಕಳ ಕೌಶಲ್ಯಾಭಿವೃದ್ಧಿಗೆ ಒತ್ತು ಅಗತ್ಯ :ರಾಜು

**ಉದಯರಶ್ಮಿ ನ್ಯೂಸ್**

ನಿಡಗುಂದಿ: ಬುದ್ಧಿಮಾಂದ್ಯ ಮಕ್ಕಳಿಗೆ ಅವರ ಚಿಕ್ಕ ವಯಸ್ಸಿನಲ್ಲಿಯೇ ತರಬೇತಿ ಮತ್ತು ಶಿಕ್ಷಣ ನೀಡಬೇಕು, ಅವರ ಕೌಶಲ್ಯಗಳನ್ನು ಅಭಿವೃದ್ಧಿಪಡಿಸಲು ಆರಂಭಿಕ ಹಸ್ತಕ್ಷೇಪ ಮತ್ತು ಆರಂಭಿಕ ಪುನರ್ವಸತಿ ಸೇವೆಗಳು ಕೇಂದ್ರಿಕ–ರಿಸುತ್ತವೆ ಎಂದು ಬುದ್ಧಿಮಾಂದ್ಯ ಮಕ್ಕಳ ಶಿಕ್ಷಣದ ಸಂಪನ್ಮೂಲ ವ್ಯಕ್ತಿ ದಾವಣಗೆರೆಯ ರಾಜು ಟಿ ಅಭಿಪ್ರಾಯಪಟ್ಟರು.

ಪಟ್ಟಣದ ರುದ್ರೇಶ್ವರ ಮಠದಲ್ಲಿ ಸಿಕಂದರಾಬಾದ್ ನ ನಿಪೀಡ್ ಮತ್ತು ವಿಜಯಪುರದ ಆಶಾದೀಪ ಅಂಗವಿಕಲರ ಸರ್ವ ಅಭಿವೃದ್ಧಿ ಸೇವಾ ಸಂಸ್ಥೆಯ ಆಶ್ರಯದಲ್ಲಿ ನಿಡಗುಂದಿ ತಾಲ್ಲೂಕಿನ ಅಂಗನವಾಡಿ, ಆಶಾಕಾರ್ಯಕರ್ತ–ರಿಗೆ ಬುದ್ಧಿಮಾಂದ್ಯ ಮಕ್ಕಳ ಶಿಕ್ಷಣದ ಅರಂಭಿಕ ಹಸ್ತಕ್ಷೇಪ ಮತ್ತು ಆರಂಭಿಕ ಪುನರ್ವಸತಿ ಸೇವೆಗಳ ಒಂದು ದಿನದ ತರಬೇತಿಯಲ್ಲಿ ಅವರು ಮಾತನಾಡಿದರು.

ಮಗುವಿನ ಪಾಲಕರಿಗೂ ಮಗು ಆರೈಕೆ, ಅವರಲ್ಲಿ ನಾನಾ ವಿಧದ ಕೌಶಲ್ಯ ಅಭಿವೃದ್ಧಿಗೊಳಿಸುವ ಬಗೆಯನ್ನು ಅಂಗನವಾಡಿ ಹಾಗೂ ಆಶಾ ಕಾರ್ಯಕರ್ತೆಯರೇ ಕಲಿಸಿಕೊಟ್ಟರೇ ಬುದ್ಧಿಮಾಂದ್ಯ ಮಕ್ಕಳನ್ನು ಅವರ ವಯಸ್ಸಿನ ಆಧಾರದ ಮೇಲೆ ವಿಂಗಡಿಸಿ ಆರಂಭಿಕ ಹಸ್ತಕ್ಷೇಪ ಘಟಕಗಳ ರಚನೆಗೆ ಕ್ರಮ ಕೈಗೊಳ್ಳಲಾಗುತ್ತಿದೆ. ಅಲ್ಲಿ ಮಕ್ಕಳಿಗೆ ಫಿಸಿಯೋಥೆರಪಿಯಂತಹ ಚಿಕಿತ್ಸೆಯನ್ನು ನೀಡಲಾಗುತ್ತದೆ




ಮಗುವಿನ ಸಮರ್ಪಕ ಪಾಲನೆಯಾಗಲಿದೆ ಎಂದರು.

ಕಾರ್ಯಕ್ರಮ ಉದ್ಘಾಟಿಸಿದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸುಪರವೈಸರ್ ಎಸ್.ಎಂ. ಕಂದಗಲ್ಲ ಮಾತನಾಡಿ, ಎಂದರು. ಮಕ್ಕಳನ್ನು ಎಲ್ಲರೊಂದಿಗೆ ಬೆರೆಸುವುದು, ಸಂವಹನ ಮಾಡುವುದು, ಚಿತ್ರಾತ್ಮಕ ಜ್ಞಾನ ಕಲಿಕೆ, ಸಂಖ್ಯಾತ್ಮಕ ಕಲಿಕೆಯ ಮೂಲಕ ಸದಾ ಚಟುವಟಿ–ಕೆಯಲ್ಲಿಡುವುದು ಅಗತ್ಯ ಎಂದರು.

ಗಿರೀಶ ಹೂಗಾರ ಅಧ್ಯಕ್ಷತೆ ವಹಿಸಿದ್ದರು.

ಜಗದೀಶ ಮುಚ್ಚಂಡಿ, ಡಿ.ಎಚ್. ಅದ್ವಾನಿ, ಶಿವಾನಂದ ಹಣಮಶೆಟ್ಟಿ, ಶಿವಲೀಲಾ ಬಿರಾದಾರ, ಜಾನಕಿ ಚವ್ಹಾಣ, ಬಾಳಪ್ಪ ಗಾಯಕವಾಡ, ಅಮೀನಪ್ಪ ಹೊಸಮನಿ, ಸಂಗೀತಾ ಹೊಸಮನಿ, ಮಲ್ಲಿಕಾರ್ಜುನ ಬಿರಾದಾರ ಮತ್ತೀತರರು ಇದ್ದರು.

## ವಿಜಯಪುರದಲ್ಲಿ ಲೋಕಸಭೆ ಚುನಾವಣೆ ಕುರಿತು ಡಿಸಿ ಟಿ.ಭಾಬಾಲನ್ ಪತ್ರಿಕಾಗೋಷ್ಠಿ

# ಜೂ.6ರವರೆಗೆ ಮಾದರಿ ನೀತಿ ಸಂಹಿತೆ

**ಉದಯರಶ್ಮಿ ನ್ಯೂಸ್**



ವಿಜಯಪುರ: ಭಾರತ ಚುನಾವಣೆ ಆಯೋಗವು ಲೋಕಸಭಾ ಸಾರ್ವತ್ರಿಕ ಚುನಾವಣೆ 2024 ರ ಅಧಿಸೂಚನೆಯನ್ನು ಹೊರಡಿಸಿದ್ದು, ಇಂದಿನಿಂದ ಜೂನ್ 6 ರ ವರೆಗೆ ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುತ್ತದೆ ಎಂದು ಜಿಲ್ಲಾಧಿಕಾರಿ ಹಾಗೂ ಚುನಾವಣೆ ಅಧಿಕಾರಿಯೂ ಆಗಿರುವ ಟಿ.ಭೂಬಾಲನ್ ಹೇಳಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣಲ್ಲಿ ಲೋಕಸಭೆ ಚುನಾವಣೆ 2024 ರ ಕುರಿತು ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು, ಚುನಾವಣೆಯ ಅಧಿಸೂಚನೆಯನ್ನ ಏ. 12 ರಂದು ಹೊರಡಿಸಲಾಗುವುದು. ಏ. 19 ನಾಮಪತ್ರ ಸಲ್ಲಿಸುವ ಕೊನೆಯ ದಿನವಾಗಿದೆ. ಏ. 20ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದೆ. ಏ. 22ರಂದು ಉಮೇದುವಾರಿಕೆ ಹಿಂತೆಗೆದುಕೊಳ್ಳುವ ದಿನವಾಗಿದೆ. ಮೆ. 7 ರಂದು ಮತದಾನ ಹಾಗೂ ಜೂನ 4 ರಂದು ಮತ ಎಣಿಕೆ ನಡೆಯಲಿವೆ ಎಂದರು.

ಜಿಲ್ಲೆಯಲ್ಲಿ ಸುಸೂತ್ರವಾಗಿ ಚುನಾವಣೆ ನಡೆಸಲು. 9 ಜನ ಸಹಾಯಕ ಚುನಾವಣೆ ಅಧಿಕಾ–ರಿಗಳನ್ನು ನೇಮಿಸಲಾಗಿದೆ. ಜಿಲ್ಲೆಯಲ್ಲಿ ಒಟ್ಟು 2085 ಮತಗಟ್ಟೆಗಳಿದ್ದು, 19,19,048 ಜನ ಮತದಾರರು ಇದ್ದಾರೆ. ಇದರಲ್ಲಿ 9,42,757 ಮಹಿಳಾ, 9,4,2757 ಗಂಡು, 218 ಇತರೆ ಮತದಾರರು ಇದ್ದಾರೆ. 1,7159 ಜನರು 85 ವರ್ಷ ಮೇಲ್ಪಟ್ಟ ಮತದಾರರು, 21,569 ವಿಶೇಷ ಚೇತನ ಮತದಾರ–ರಿದ್ದಾರೆ. 85 ವರ್ಷ ಮೇಲ್ಪಟ್ಟ ಮತದಾರರಿಗೆ ಮನೆಯಿಂದಲೇ ಮತದಾನ ಮಾಡಲು ಅವಕಾಶ ಕಲ್ಪಿಸಲಾಗುತ್ತದೆ. ಅಂಚೆ ಮತ ಪತ್ರ ವಿತರಿಸುವ ಕುರಿತಂತೆ ಭಾರತ ಚುನಾವಣೆ ಆಯೋಗವು ನೀಡುವ ನಿರ್ದೇಶನ ಅನುಸಾರ ಕ್ರಮ ವಹಿಸಿ ಪರಿಶೀಲಿಸಲಾಗುವುದು ಎಂದು ತಿಳಿಸಿದರು.

ಜಿಲ್ಲೆಯಲ್ಲಿ 27 ಚೆಕ್‌ಪೋಸ್ಟ್ ಗಳನ್ನು ಸ್ಥಾಪಿಸಲಾಗಿದ್ದು, ಅವುಗಳಲ್ಲಿ 11 ಅಂತರರಾಜ್ಯ ಚೆಕ್‌ಪೋಸ್ಟ್, 16 ಅಂತರ ಜಿಲ್ಲಾ ಚೆಕ್‌ಪೋಸ್ಟ್ ಸ್ಥಾಪಿಸಲಾಗಿದೆ. ಚುನಾವಣೆ ಪ್ರಕ್ರಿಯೆ ಶಾಂತಿ ಸುವ್ಯವಸ್ಥೆಯಿಂದ ನಡೆಸಲು 8ಡಿಎಸ್ಪಿ, 26 ಪಿಎಸ್, 90 ಪಿಎಸ್ಐ, 118 ಎಎಸ್ಐ, 1,888 ಪಿಸಿ, 976 ಹೋಮ್‌ಗಾರ್ಡ ಸೇರ ಒಟ್ಟು 3106 ಸಿಬ್ಬಂದಿಗಳನ್ನು ನೇಮಕ ಮಾಡಲಗಿದೆ ಎಂದು ಮಾಹಿತಿ ನೀಡಿದರು.

ಜಿಲ್ಲಾ ಹಂತದಲ್ಲಿ ಹಾಗೂ ವಿಧಾನಸಭಾ ಮತಕ್ಷೇತರವಾರು ದೂರು ನಿರ್ವಹಣಾ ಕೋಶವನ್ನು ಸ್ಥಾಪಿಸಲಾಗಿದ್ದು, ಸಾರ್ವಜನಿಕರು ಚುನಾವಣಾ ವಿಷಯದ ಕುರಿತು ದೂರು ಸಲ್ಲಿಸಲು ಜಿಲ್ಲಾ ನೋಡಲ್ ಅಧಿಕಾರಿ ಮೋಬೈಲ್ ಸಂಖ್ಯೆ 9945354447ಗೆ ಕರೆ ಮಾಡಿ ದೂರು ದಾಖಲಿಸಬಹುದು. ಚುನಾವಣೆ ಸಂಬಂಧಿಸಿದಂತೆ ನೀತಿ ಸಂಹಿತೆ ಉಲ್ಲಂಘನೆ ಪ್ರಕರಣಗಳು ಕಂಡುಬಂದರೆ ಸಿ–ವಿಜಿಲ್ □□□ಪ್ ಮೂಲಕ ದೂರು ದಾಖಲಿಸಬಹುದು ಎಂದು ಹೇಳಿದರು.

ಗೋಷ್ಠಿಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಋಷಿಕೇಶ ಸೋನಾವಣೆ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಶಿ ಆನಂದ, ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ ಉಪಸ್ಥಿತ–ರಿದ್ದರು.

## ಮಾ.17 ರಂದು ಮಹಾಭಿಷೇಕ

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ಪಟ್ಟಣದ ಹಡಲಗೇರಿ ರಸ್ತೆಯಲ್ಲಿರುವ ಪದ್ಮಾವತಿ ದೇವಸ್ಥಾನದ ಸಮುದಾಯಭವನದಲ್ಲಿ ಮಾ.17 ರಂದು ಬೆಳಿಗ್ಗೆ 11 ಗಂಟೆಗೆ ಜಿನೇಂದ್ರ ಭಗವಾನರ ಮಹಾ ಅಭಿಷೇಕ ಹಾಗೂ ಮಹಾತಪಸ್ವಿ, ವಿದ್ಯಾಭೂಷಣ ಮುನಿಮಹಾರಾಜರ ಕೇಶಲೋಚನ ಕಾರ್ಯಕ್ರಮ ಜರುಗಲಿದೆ. ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಪ್ರಕಟಣೆ ತಿಳಿಸಿದೆ.

# ಕೆರೆಗಳ ಭರ್ತಿಗೆ ಕಾಲುವೆಗಳಿಗೆ ನೀರು ಹರಿಸಲು ಆಗ್ರಹ

**ಉದಯರಶ್ಮಿ ನ್ಯೂಸ್**



ಆಲಮಟ್ಟಿ: ನೀರು ತಲುಪದೆ ಇರುವ ಕೆರೆಗಳಿಗೆ ನೀರು ಭರ್ತಿ ಮಾಡಲು ಮತ್ತೊಮ್ಮೆ ಕಾಲುವೆಗಳಿಗೆ ನೀರು ಹರಿಸಬೇಕೆಂದು ಆಗ್ರಹಿಸಿ ಶನಿವಾರ ಅಖಂಡ ಕರ್ನಾಟಕ ರೈತ ಸಂಘದ ವತಿಯಿಂದ ಆಲಮಟ್ಟಿಯ ಮುಖ್ಯ ಎಂಜಿನಿಯರ್ ಅವರಿಗೆ ಮನವಿ ಸಲ್ಲಿಸಿದರು.

ಸಂಘದ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ಅರವಿಂದ ಕುಲಕರ್ಣಿ ಮಾತನಾಡಿ ಬೇಸಿಗೆ ಸಂದರ್ಭದಲ್ಲಿ ಜನ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿನ ಅನುಕೂಲತೆ ಕಲ್ಪಿಸಲು ಕಳೆದ ತಿಂಗಳು 19 ರಂದು ಪ್ರಾದೇಶಿಕ ಆಯುಕ್ತರ ಅನುಮತಿ ಮೇರೆಗೆ ನೀರು ಹರಿಸಲು ಕ್ರಮ ಕೈಗೊಳ್ಳಲಾಗಿತ್ತು. ಜಿಲ್ಲೆಯಲ್ಲಿರುವ 99 ಕೆರೆಗಳ ಪೈಕಿ ಅರ್ಧಕ್ಕೂ ಹೆಚ್ಚು ಕೆರೆಗಳಲ್ಲಿ ಸಂಪೂರ್ಣ ನೀರು ಬಂದಿಲ್ಲ, ಹೂವಿನಹಿಪ್ಪರಗಿ ಸಂಕನಾಳ ಕೆರೆಗೆ ಒಂದು ತೊಟ್ಟು ನೀರು ಬಂದಿಲ್ಲ ಅಂದರಂತೆ ಬಸವನಬಾಗೇವಾಡಿ ಶಾಖಾ ಕಾಲುವೆಗೆ ನೀರು ಹರಿಸಿದ್ದರು ಕೂಡಾ ತೃಪ್ತಿಕರವಾಗಿ ನೀರು ಬಂದಿಲ್ಲ ಕೆಲವೊಂದು ಭಾಗದಲ್ಲಿ ಕಾಲುವೆ ಕೊನೆ ಅಂಚಿನವರೆಗೂ ನೀರು ತಲುಪೆ ಇಲ್ಲ ನೀರು ಹರಿಸಿದ್ದದೇವೆಂದು ನೀರಾವರಿ ಇಲಾಖೆಯವರಿಗೆ ಹೇಳಿಕೊಳ್ಳಲು ಮಾತ್ರವಾಗಿದೆ. ಆದರೆ ವಾಸ್ತವಾಗಿ ಇನ್ನೂ ಬಹುತೇಕ ಕೆರೆಗಳಿಗೆ ನೀರು ಬಂದಿಲ್ಲ ಮಲಘಾಣ ಪಶ್ಚಿಮ ಕಾಲುವೆ ಕೊನೆಯ ಅಂಚಿನವರೆಗೂ ನೀರು ಬಂದಿಲ್ಲ ಇದರಿಂದ ರೈತರಿಗೆ ನೀರು ಹರಿಸಿದರು ಪ್ರಯೋಜನೆ ಇಲ್ಲದಂತಾಗಿದೆ. ಕಾಲುವೆ ಮಧ್ಯದಲ್ಲಿ ನೀರನ್ನು ಪೊಲ್ ಮಾಡಿದ್ದಾರೆ ಹೀಗಾಗಿ ನೀರು ಹರಿಸಿದರು ರೈತ–ರಿಗೆ ಉಪಯೋಗವಿಲ್ಲದಂತಾಗಿದೆ. ಆದ್ದರಿಂದ ಮತ್ತೊಮ್ಮೆ ಕೆ.ಬಿ.ಜೆ.ಎನ್.ಎಲ್. ಅಧಿಕಾರಿಗಳು ಎಲ್ಲ ಕೆರೆಗಳನ್ನು ಸಮೀಕ್ಷೆ ಮಾಡಿ ಎರಡು ಮೂರು ದಿನಗಳಲ್ಲಿ ಮತ್ತೆ ಕಾಲುವೆಗೆ ನೀರು ಹರಿಸಲು ಪ್ರಾರಂಭಿಸಬೇಕು ಎಂದು ಅವರು ಆಗ್ರಹಿಸಿದರು.

ಈ ಸಂದರ್ಭದಲ್ಲಿ ವಿಠಲ ಬಿರಾದಾರ, ಮಲಿಗೆಪ್ಪ ಸಾಸನೂರ, ಲಾಲಸಾ ಹಳ್ಳೂರ, ಭೀರಪ್ಪ ಗೋಡೆಕರ, ಶೇಖಪ್ಪ ಜಮ್ಮಲದಿನ್ನಿ, ಸಾಹೇಬಗೌಡ ಪಾಟೀಲ, ಮುತ್ತು ಜಮ್ಮಲದಿನ್ನಿ, ಬಾಬು ಹಡಪದ, ರಮೇಶ ಜಮ್ಮಲದಿನ್ನಿ, ಕೆಂಚಪ್ಪ ಮಾದರ ಲಾಳೆಸಾಬ ಕೆಳಗಿನಮನಿ, ಶಿವಶಂಕರ ಕಟಗೂರ, ಮಹಾಂತೇಶ ಜಮ್ಮಲದಿನ್ನಿ, ಯಲ್ಲಪ್ಪ ಮನ್ನಾಳ ಇದ್ದರು.

ಮುಖ್ಯ ಎಂಜಿನಿಯರ್ ಪರವಾಗಿ ಡಿಸೈನ್ ಎಂಜಿನಿಯರ್ ಪ್ರಕಾಶ ಕಾತರಕಿ ಹಾಗೂ ವಿಜಯಕುಮಾರ ಕೂಗಲಿ ಮನವಿ ಸ್ವೀಕರಿಸಿದರು.

ಈಚೆಗೆ ಕಾಲುವೆಯ ಮೂಲಕ ಹರಿಸಿದ ನೀರಿನಿಂದ ಸಾಕಷ್ಟು ಕೆರೆಗಳು ಭರ್ತಿಯಾಗಿಲ್ಲ, ನೀರು ಹರಿಸಿ ಕೆರೆ ಭರ್ತಿಗೆ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿ ಅಖಂಡ ಕರ್ನಾಟಕ ರೈತ ಸಂಘದ ಸದಸ್ಯರು ಶನಿವಾರ, ಆಲಮಟ್ಟಿಯ ಕೆಬಿಜೆ–ಎನ್ ಎಲ್ ಡಿಸೈನ್ ಎಂಜಿನಿಯರ್ ಪ್ರಕಾಶ ಕಾತರಕಿ ಅವರಿಗೆ ಮನವಿ ಸಲ್ಲಿಸಿದರು

## ಸಚಿನ ಅವಟಿ ನೇಮಕ

**ಉದಯರಶ್ಮಿ ನ್ಯೂಸ್**



ಚಡಚಣ: ಪಟ್ಟಣದ ಸಚಿನ ಅವಟಿ ಅವರನ್ನು ವಿಜಯಪುರ ಯುವ ಮೋರ್ಚಾದ ಜಿಲ್ಲಾ ಕಾರ್ಯದರ್ಶಿಯಾಗಿ ಆಯ್ಕೆ ಮಾಡಲಾಗಿದೆ ಎಂದು ಜಿಲ್ಲಾ ಯುವ ಮೋರ್ಚಾ ಅಧ್ಯಕ್ಷರಾದ ಬಸವರಾಜ ಹೂಗಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR